ವಿಜಯಪುರ | ಸಂಪುಟ 02 | ಸಂಚಿಕೆ 230 | ಪುಟ 4 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ

Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ ನವೆಂಬರ್ 06, 2024



"ವಿಜಯಪುರ ನಗರಕ್ಕೆ ಅಲಮಟ್ಟಿ ಹಿನ್ನೀರಿನಿಂದ ಕುಡಿಯುವ ನೀರು ಪೂರೈಸುವ ಸುಮಾರು 10.8 ಕಿ.ಮೀ ಉದ್ದದ ಕೊಳವೆ ಮಾರ್ಗ ಶಿಥಿಲವಾಗಿದ್ದು, ಅದನ್ನು ರೂ. 52 ಕೋಟಿ ವೆಚ್ಚದಲ್ಲಿ ಬದಲಿಸಿ, ಹೊಸದಾಗಿ ಎಂ.ಎಸ್. ಪೈಪುಗಳನ್ನು ಅಳವಡಿಸಲಾಗುವುದು."

■ ಎಂ ಬಿ ಪಾಟೀಲ
ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರು

### ಶಾಸಕ ಬಸನಗೌಡ ಪಾಟೀಲ ಯತ್ನಾಳ ನೇತೃತ್ವದ ಅನಿರ್ದಿಷ್ಟಾವಧಿ ಧರಣಿ । ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಸಂಸದ ಜಿಗಜಿಣಗಿ ಭಾಗಿ

# ವಕ್ಫ್ ವಿವಾದ: 3ನೇ ದಿನಕ್ಕೆ ಕಾಲಿರಿಸಿದ ಅಹೋರಾತ್ರಿ ಧರಣಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕಾನೂನು ಬಾಹಿರವಾಗಿ ರೈತರ, ಸಂಘ-ಸಂಸ್ಥೆಗಳ, ಮಠ ಮಾನ್ಯಗಳ ಜಮೀನು, ಅಲ್ಲದೇ ಸರ್ಕಾರಿ ಜಮೀನು, ಇತ್ಯಾದಿ ಆಸ್ತಿಗಳ ಉತಾರೆಯಲ್ಲಿ ವಕ್ಫ್ ಆಸ್ತಿ ಎಂದು ಎಂಟ್ರಿ ಮಾಡಿರುವುದನ್ನು ತಕ್ಷಣ ತೆಗೆದು ಹಾಕುವುದು, ವಕ್ಫ್ ಕಾಯ್ದೆಯನ್ನೇ ದೇಶದಿಂದ ಕೊತ್ತೊಗೆಯುವುದು ಸೇರಿದಂತೆ ವಿವಿಧ ಬೇಡಿಕೆಗಳಿಗಾಗಿ ಒತ್ತಾಯಿಸಿ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರ ನೇತೃತ್ವದಲ್ಲಿ ವಿಜಯಪುರ ಜಿಲ್ಲಾಧಿಕಾರಿ ಕಚೇರಿ ಹೊರಾಂಗಣದಲ್ಲಿ ನಡೆಯುತ್ತಿರುವ ಅನಿರ್ಧಿಷ್ಟಾವಧಿ ಅಹೋರಾತ್ರಿ ಧರಣಿ 3ನೇ ದಿನಕ್ಕೆ ಕಾಲಿರಿಸಿದ್ದು, ಮಂಗಳವಾರ ಜಿಲ್ಲೆಯ ವಿವಿಧ ಗ್ರಾಮಗಳ ರೈತರು, ವಿವಿಧ ಸಮುದಾಯದವರು, ಸಮಘ-ಸಂಸ್ಥೆಯವರು ಬೆಂಬಲ ವ್ಯಕ್ತಪಡಿಸಿದರು.

ಜಿಲ್ಲೆಯ ವಿವಿಧ ಭಾಗಗಳಿಂದ ಧರಣಿ ಸ್ಥಳಕ್ಕೆ ತಂಡೋಪ ತಂಡವಾಗಿ ಆಗಮಿಸಿ, ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿ, ರಾಜ್ಯ ಸರ್ಕಾರ ರೈತರ ಜಮೀನನ್ನು ಕಬಳಿಸುವ ಹುನ್ನಾರ ನಡೆಸಿದ್ದು, ಯಾವುದೇ ಕಾರಣಕ್ಕೂ ನಾವು ಅವಕಾಶ ನೀಡುವುದಿಲ್ಲ ಎಂದು ರೈತರು ಎಚ್ಚರಿಕೆ ನೀಡಿದರು.

ವಿವಿಧ ಗ್ರಾಮಗಳ ರೈತ ಮುಖಂಡರು, ರೈತರು, ಪಂಚಮಸಾಲಿ ಸಮಾಜ, ಬಣಗಾರ ಸಮಾಜ, ಮರಾಠಾ ಸಮಾಜದ ಮುಖಂಡರು, ಕರ್ನಾಟಕ ಮಾದಿಗ ಜನ ಸಂಘ ಹೋರಾಟ ಸಮಿತಿ (ರಿ) ಬೆಂಗಲೂರು ಪದಾಧಿಕಾರಿಗಳು ಭಾಗವಹಿಸಿ ಬೆಂಬಲ ವ್ಯಕ್ತಪಡಿಸಿದರು.

ಶಾಸಕ ಬಸನಗೌಡ ಪಾಟೀಲ ಯತ್ನಾಳ ಮಾತನಾಡಿ, ನವೆಂಬರ್ 7 ರಂದು ವಿಜಯಪುರ ನಗರಕ್ಕೆ ವಕ್ಫ್ ಕಾಯ್ದೆ ತಿದ್ದುಪಡಿ ಜಂಟಿ ಸಂಸದೀಯ ಸಮಿತಿ (ಜಾಯಿಂಟ್ ಪಾರ್ಲಿಮೆಂಟರಿ ಕಮಿಟಿ) ಚೇರಮನ್ ಜಗದಾಂಬಿಕಾ ಪಾಲ್ ರವರ ತಂಡ ಆಗಮಿಸಲಿದ್ದು, ಅನ್ಯಾಯಕ್ಕೆ ಒಳಗಾದವರ ಜೊತೆ ಚರ್ಚಿಸಿ ಅಹವಾಲು ಸ್ವೀಕರಿಸಲಿದೆ. ಆದ್ದರಿಂದ ರೈತರು ನಮ್ಮ ಕಚೇರಿಗೆ ತಮ್ಮ ಆಸ್ತಿಗಳು ಕಾನೂನು ಬಾಹಿರವಾಗಿ ವಕ್ಫ್ ಆಗಿದ್ದರ ಕುರಿತು ಅಗತ್ಯ ದಾಖಲೆಗಳನ್ನು ತಮ್ಮ ಮನವಿಪತ್ರದೊಂದಿಗೆ ಸಲ್ಲಿಸಲು ತಿಳಿಸಿದರು.

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಸಂಸದ ರಮೇಶ ಜಿಗಜಿಣಗಿ, ಮಾಜಿ ಸಚಿವ ಎಸ್.ಕೆ.ಬೆಳ್ಳುಬ್ಬಿ, ಮಾಜಿ ಶಾಸಕ ರಮೇಶ ಭೂಸನೂರ, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಆರ್.ಎಸ್.ಪಾಟೀಲ ಕೂಚಬಾಳ ಸೇರಿದಂತೆ ನಗರವೂ ಸೇರಿದಂತೆ ಜಿಲ್ಲೆಯ ಹಾಲಿ-ಮಾಜಿ ಜನಪ್ರತಿನಿಧಿಗಳು, ರೈತರು, ಮಹಿಳೆಯರು ಭಾಗವಹಿಸಿದ್ದರು.








"ರೈತರ ಆಸ್ತಿ ಕಬಳಿಸಲು ಹುನ್ನಾರ ನಡೆಸಿರುವ ಈ ಕಾಂಗ್ರೆಸ್ ದಿಂದ ದೇಶಕ್ಕೆ ಒಳ್ಳೆಯದಾಗುವುದಿಲ್ಲವೆಂದು ಡಾ.ಅಂಬೇಡ್ಕರವರು ಹೇಳಿದ್ದರು. ಒಮ್ಮೆ ಆ ಪಕ್ಷದಿಂದ ಹೊರ ಬಂದ ಮೇಲೆ ಮತ್ತೆ ಹೋಗಲಿಲ್ಲ. ವಕ್ಫ್ ಕಾಯ್ದೆ ತಿದ್ದುಪಡಿ ತರುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಗಂಭೀರವಾಗಿ ಕೆಲಸ ನಡೆಸಿದೆ. ಜಗತ್ತಿನ ಯಾವುದೇ ಶಕ್ತಿ ಈ ತಿದ್ದುಪಡಿಗೆ ವಿರೋಧ ಮಾಡಿದರೂ ತಿದ್ದುಪಡಿ ತಂದೇ ತರುವುದಾಗಿ ಪ್ರಧಾನಿ ನರೇಂದ್ರ ಮೋದಿಯವರು ಹೇಳಿದ್ದಾರೆ."

■ ಬಸನಗೌಡ ಪಾಟೀಲ, ಯತ್ನಾಳ
ಶಾಸಕರು, ವಿಜಯಪುರ

## ಬುತ್ತಿಯೊಂದಿಗೆ ಹೋರಾಟಕ್ಕೆ ರೈತರ ಬೆಂಬಲ

ರೈತರಿಗಾಗಿ ನಡೆಸುತ್ತಿರುವ ಈ ಧರಣಿ ನಿರತ ಹೋರಾಟಗಾರರ ಹಸಿವು ತಣಿಸಲು ಚಡಚಣ ತಾಲ್ಲೂಕಿನ ಹಲಸಂಗಿ ಗ್ರಾಮದ ರೈತ ಬಾಂಧವರಾದ ಸಿದ್ದಾರಾಮ ಕೊಟ್ಟಲಗಿ, ತುಕಾರಾಮ ಬೋಗರ, ವಿಜಯಕುಮಾರ್ ರಾಂಪೂರ, ಬಾಳು ಮದಬಾವಿ, ಗುರುದೇವಿ ತರಡಿ, ರಾಜಶೇಖರ ತಟ್ಟಿಮನಿ ರವರು, 100 ಸಜ್ಜೆ ರೊಟ್ಟಿ, 100 ಜೋಳದ ರೊಟ್ಟಿ, 100 ಚಪಾತಿ, 125 ಸೇಂಗಾ ಹೋಳಿಗೆ, ಒಂದು ಕೆ.ಜಿ ತುಪ್ಪ, 5 ಕೆ.ಜಿ ಉಪ್ಪಿನಕಾಯಿ, 10 ಕೆ.ಜಿ ಹುಳಿಬಾನ, 10 ಕೆ.ಜಿ ಉಳ್ಳಾಗಡ್ಡಿ, ತರಕಾರಿ, ಹಣ್ಣು ಹಾಗೂ ಎರಡು ಬಾಕ್ಸ್ ನೀರಿನ ಬಾಟಲ್ ಗಳೊಂದಿಗೆ ಆಗಮಿಸಿ ಹೋರಾಟಕ್ಕೆ ಬೆಂಬಲ ನೀಡಿದರು. ರೈತರು ಪ್ರೀತಿಯಿಂದ ತಂದ ಊಟವನ್ನು ಧರಣಿ ವೇದಿಕೆಯಲ್ಲೇ ಕೇಂದ್ರ ಸಚಿವರು, ಶಾಸಕರು ಮೊದಲಾದ ಹೋರಾಟಗಾರರು ಸವಿದರು.

# ನಾಳೆ(ನ.7) 'ಜೆಪಿಸಿ' ತಂಡ ವಿಜಯಪುರಕ್ಕೆ ಭೇಟಿ: ಸಚಿವೆ ಶೋಭಾ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರದ ಜಿಲ್ಲಾಧಿಕಾರಿ ಕಚೇರಿ ಹೊರಾಂಗಣದಲ್ಲಿ ಮೂರು ದಿನಗಳಿಂದ ನಡೆಯುತ್ತಿರುವ ಅನಿರ್ಧಿಷ್ಟ ಅವಧಿ ಅಹೋರಾತ್ರಿ ಧರಣಿ ಸ್ಥಳಕ್ಕೆ ಇದೇ ನ. 7 ರಂದು ಬೆಳಿಗ್ಗೆ 10.30 ಗಂಟೆಗೆ ವಕ್ಫ್ ಕಾಯ್ದೆ ತಿದ್ದುಪಡಿ ಜಂಟಿ ಸಂಸದೀಯ ಸಮಿತಿ (ಜಾಯಿಂಟ್ ಪಾರ್ಲಿಮೆಂಟರಿ ಕಮಿಟಿ) ಚೇರಮನ್ ಜಗದಾಂಬಿಕಾ ಪಾಲ್ ರವರ ತಂಡ ಆಗಮಿಸಿ, ಅನ್ಯಾಯಕ್ಕೆ ಒಳಗಾದವರಿಂದ ಅಹವಾಲು ಸ್ವೀಕರಿಸಲಿದೆ ಎಂದು ಕೇಂದ್ರ ಸಚಿವರಾದ ಶೋಭಾ ಕರಂದ್ಲಾಜೆ ಹಾಗೂ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ರವರು ತಿಳಿಸಿದ್ದಾರೆ.

ಈ ಕುರಿತು ಜಂಟಿ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ವಕ್ಫ್ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಅದಾಲತ್ ನಡೆಸಿ, ನೀಡಿರುವ ಮೌಖಿಕ ಆದೇಶದಂತೆ ರೈತರ, ದೇವಸ್ಥಾನಗಳ, ಮಠ-ಮಾನ್ಯಗಳ, ಸರ್ಕಾರಿ, ಇತ್ಯಾದಿ ಜಮೀನು/ಆಸ್ತಿಗಳ ಉತಾರೆಯಲ್ಲಿ ಕಾನೂನು ಬಾಹಿರವಾಗಿ ವಕ್ಫ್ ಆಸ್ತಿ ಎಂದು ಎಂಟ್ರಿ ಮಾಡಿದಲ್ಲದೆ, ಹಲವರಿಗೆ ನೋಟಿಸ್ ಸಹ ನೀಡಲಾಗಿದೆ. ಈ ಕುರಿತಂತೆ ಅನ್ಯಾಯಕ್ಕೆ ಒಳಗಾದವರಿಂದ ಅಹವಾಲು ಸ್ವೀಕರಿಸಲಿದ್ದಾರೆ. ಬರಲಿರುವ ಚಳಿಗಾಲದ ಲೋಕಸಭಾ ಅಧಿವೇಶನದಲ್ಲಿ ವಕ್ಫ್ ತಿದ್ದುಪಡಿ ಕಾಯ್ದೆ ವಿಷಯವನ್ನು ಮಂಡಿಸಲಿದ್ದಾರೆ.



ಅದರ ಪೂರ್ವಭಾವಿ ಆಗಿ ಬರಲಿರುವ ಸದರಿ ತಂಡಕ್ಕೆ ಬೀದರ, ಕಲಬುರ್ಗಿ, ಕೊಪ್ಪಳ, ಬಳ್ಳಾರಿ, ರಾಯಚೂರ, ಯಾದಗಿರಿ, ವಿಜಯಪುರ, ಬಾಗಲಕೋಟ, ಚಿಕ್ಕೋಡಿ ಭಾಗದ ರೈತರು, ಮಠಾಧೀಶರು, ಸಂಘ-ಸಂಸ್ಥೆಯವರು, ದೇವಸ್ಥಾನ ಸ' ಮಿ ೦ತಿ ೦ು'ು ವ' ೦'ು, ನಾಗರಿಕರು ತಮ್ಮ ಆಸ್ತಿಗಳು ಕಾನೂನು ಬಾಹಿರವಾಗಿ ವಕ್ಫ್ ಆಗಿದ್ದರ ಕುರಿತು ಅಗತ್ಯ ದಾಖಲೆಗಳನ್ನು ತಮ್ಮ ಮನವಿಪತ್ರದೊಂದಿಗೆ ಧರಣಿ ಸ್ಥಳಕ್ಕೆ ಅಥವಾ ವಿಜಯಪುರ ನಗರ ಶಾಸಕರ ಸಾರ್ವಜನಿಕ ಸಂಪರ್ಕ ಕಾರ್ಯಾಲಯಕ್ಕೆ ಒಂದು ದಿನ ಮುಂಚಿತವಾಗಿ (ನವೆಂಬರ್ 6) ಅಂದರೆ ಇಂದು ಸಂಜೆ 5 ರೊಳಗಾಗಿ ಆಗಮಿಸಿ ಸಲ್ಲಿಸಬೇಕು ಎಂದು ಕೇಂದ್ರ ಸಚಿವರಾದ ಶೋಭಾ ಕರಂದ್ಲಾಜೆ ಹಾಗೂ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ರವರು ವಿನಂತಿಸಿದ್ದಾರೆ.

# ವಕ್ಫ್ ವಿವಾದ: ರಾಜಕೀಯ ಲಾಭಕ್ಕಾಗಿ ದುರಾಲೋಚನೆ ಬೇಡ: ಸೋಲಾಪುರ

■ ಉದಯರಶ್ಮಿ ದಿನಪತ್ರಿಕೆ




ಕಾಂಗ್ರೆಸ್, ಬಿಜೆಪಿ ನಾಯಕರು ವಕ್ಫ್ ಬೋರ್ಡ್ ಆಸ್ತಿ ವಿವಾದವನ್ನು ಜ್ವಲಂತವಾಗಿರಿಸಿ ರಾಜಕೀಯ ಲಾಭ ಪಡೆಯುವ ದುರಾಲೋಚನೆ ಬಿಡಲಿ, ರೈತರಿಗೆ ನ್ಯಾಯ ಒದಗಿಸುವ ಕೆಲಸ ಮಾಡಲಿ ಎಂದು ವಿಜಯಪುರ ಜಿಲ್ಲಾಧ್ಯಕ್ಷ ಭೋಗೇಶ್ ಸೋಲಾಪುರ್ ಆಗ್ರಹಿಸಿದರು.

ನಗರದಲ್ಲಿ ಮಂಗಳವಾರ ಪ್ರಕಟಣೆಯಲ್ಲಿ ತಿಳಿಸಿದ ಅವರು, ವಕ್ಫ್ ಆಸ್ತಿ ವಿವಾದವನ್ನು ಜ್ವಲಂತವಾಗಿರಿಸಿ ರಾಜಕೀಯ ಲಾಭ ಪಡೆಯಲು ಎರಡು ಪಕ್ಷಗಳು ಹವಣಿಸುತ್ತಿವೆ. ವಕ್ಫ್ ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಕಾಲಕ್ಕನುಗುಣವಾಗಿ ನವೀಕರಿಸದೆ ಗೊಂದಲಗಳನ್ನು ಸೃಷ್ಟಿಸಲಾಗಿದೆ. ರಾಜ್ಯದಲ್ಲಿ ಅನೇಕ ಸಮಸ್ಯೆಗಳಿವೆ, ಸಂಪುಟ ಸಚಿವರಿಗೆಲ್ಲ ಉಪಚುನಾವಣೆ ಉಸ್ತುವಾರಿ ಹೊರಿಸಲಾಗಿದೆ. ರಾಜ್ಯದ ಆಡಳಿತ ಯಂತ್ರವೇ ಸ್ಥಗಿತಗೊಂಡಿದೆ. ಆದರೆ ಇದನ್ನು ವಕ್ಫ್ ಬೋರ್ಡ್ ಆಸ್ತಿ ವಿವಾದದ ಮೂಲಕ ಮರೆ ಮಾಚಲು ಪ್ರಯತ್ನಗಳು ನಡೆಯುತ್ತಿವೆ. ಸಚಿವ ಜಮೀರ್ ಅಹ್ಮದ್ ಖಾನ್ ಪರಿಸ್ಥಿತಿ ಅವಲೋಕಿಸಿ ರೈತರಿಗೆ ನ್ಯಾಯ ಒದಗಿಸುವ ಪ್ರಯತ್ನ ಮಾಡಬೇಕೆ ವಿನಃ ಅಲ್ಪಸಂಖ್ಯಾತರನ್ನು ಎತ್ತಿಕಟ್ಟುವ ಕೆಲಸ ಮಾಡಬಾರದು ಎಂದು ಆಕ್ರೋಶ ಹೊರಹಾಕಿದರು.

ವಿಜಯಪುರದಲ್ಲಿ ರೈತರು ನೋಟಿಸ್ ಪಡೆದಿರುವ ಹಿನ್ನಲೆಯಲ್ಲಿ ಪಹನಿಯಲ್ಲಿ ಇಂದಿಕರಿಸಿದ ವಕ್ಫ್ ಹೆಸರನ್ನು ಸರ್ಕಾರ ತೆಗೆದು ಹಾಕಬೇಕು. ನಮ್ಮ ರೈತರಿಗೆ ತಮ್ಮಜಾಗ ಕಳೆದುಕೊಳ್ಳುವ ಭಯ ಶುರುವಾಗಿದ್ದು, ಸಚಿವರು ಕೂಡಲೇ ಆ ರೈತರ ಜೊತೆ ಮಾತನಾಡಿ, ಅವರ ಆತಂಕ ದೂರ ಮಾಡುವ ಕೆಲಸ ಮಾಡಲಿ. ಇಂತಹ ವಿವಾದಗಳು ಮುಂದೆ ಬರದಂತೆ ನೋಡಿಕೊಳ್ಳಲು ಮಾನ್ಯ ಸಿದ್ದರಾಮಯ್ಯ ಸರ್ಕಾರ ಕ್ರಮ ವಹಿಸಲಿ. ಅತಿವೃಷ್ಠಿಯಿಂದ ರಾಜ್ಯದಲ್ಲಿ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೂಡಲೇ ರಾಜ್ಯ ಮತ್ತು ಕೇಂದ್ರ ಸರ್ಕಾರ ರೈತರಿಗೆ ನೆರವು ನೀಡಬೇಕು. ಯಾವ ರೈತರು ಬೆಳೆ ಕಳೆದುಕೊಂಡಿದ್ದಾರೋ ಅವರಿಗೆ ಕೂಡಲೇ ಪರಿಹಾರದ ಹಣ ಬಿಡುಗಡೆ ಮಾಡಲು ಕ್ರಮ ವಹಿಸಲಿ ಎಂದು ಭೋಗೇಶ್ ಸೋಲಾಪುರ್ ಒತ್ತಾಯಿಸಿದ್ದಾರೆ.

# ಅಂಗವಿಕಲ ನೌಕರರ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಮನವಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಅಂಗವಿಕಲ ನೌಕರರ ವಿವಿಧ ಬೇಡಿಕೆ ಈಡೇರಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಹಾಗೂ ಜಿಲ್ಲಾ ಪಂಚಾಯತಿ ಮುಖ್ಯ ನಿರ್ವಾಹಕ ಅಧಿಕಾರಿ ರಿಷಿ ಆನಂದ ಅವರಿಗೆ ಅಂಗವಿಕಲ ನೌಕರ ಸಂಘದಿಂದ ಮಂಗಳವಾರ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳು ಮಾತನಾಡಿ, ರಾಜ್ಯದ ಏಳನೇ ವೇತನ ಆಯೋಗದ ಶಿಫಾರಸ್ಸಿನಂತೆ ಶೇ.6ರಷ್ಟು(ರಾಜ್ಯಸರ್ಕಾರಿ ಅಂಗವಿಕಲ ನೌಕರರಿಗೆ) ಪ್ರಯಾಣ ಭತ್ಯೆಯ ಆದೇಶವನ್ನು ಸರ್ಕಾರವು ಕೂಡಲೇ ಹೊರಡಿಸುವುದು. ಅಂಗವಿಕಲ ಸರ್ಕಾರಿ ನೌಕರರಿಗೆ ವೇತನ ಆಯೋಗ ನೀಡಿದ ಎಲ್ಲಾ ಶಿಫಾರಸ್ಸುಗಳನ್ನು ಯಥಾವತ್ತಾಗಿ ಜಾರಿಗೊಳಿಸುವುದು. ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ ಅಂಗವಿಕಲ ನೌಕರರಿಗೆ ಕೇಂದ್ರ ಸರ್ಕಾರವು ಡಿಸೆಂಬರ್ 28, 2023ರಂದು ಎ, ಬಿ, ಸಿ, ಮತ್ತು ಡಿ ವೃಂದದ ಹುದ್ದೆಗಳಿಗೆ ಬಡ್ತಿಯಲ್ಲಿ ಮೀಸಲಾತಿಯನ್ನು ಜಾರಿಗೊಳಿಸಿದೆ. ಅದರಂತೆ ಕರ್ನಾಟಕ ಸರ್ಕಾರವು ಸಿ ಮತ್ತು ಡಿ ವೃಂದದ ಹುದ್ದೆಗಳಿಗೆ ಮಾತ್ರ ಬಡ್ತಿಯಲ್ಲಿ ಮೀಸಲಾತಿ ನೀಡಿರುತ್ತದೆ. ಅದೇ ರೀತಿಯಾಗಿ ಎ ಮತ್ತು ಬಿ ವೃಂದದ ಹುದ್ದೆಗಳಿಗೂ ಬಡ್ತಿಯಲ್ಲಿ ಮೀಸಲಾತಿಯನ್ನು ಕಲ್ಪಿಸಿ ಶೀಘ್ರವಾಗಿ ಆದೇಶವನ್ನು ಹೊರಡಿಸುವುದು, ರಾಜ್ಯದ ಶಾಲಾ ಕಾಲೇಜುಗಳಲ್ಲಿನ ಶಿಕ್ಷಕರು, ಉಪನ್ಯಾಸಕರು ಹಾಗೂ ಬೋಧಕೇತರ ಅಂಗವಿಕಲ ನೌಕರರ ಸೇವಾವಧಿಯಲ್ಲಿ ಒಂದು ಬಾರಿ ನೀಡುವ ವರ್ಗಾವಣೆ ಪ್ರಕ್ರಿಯೆ ನಿಯಮವನ್ನು ಕೈಬಿಡುವುದು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿದರು.

ಈ ವೇಳೆ ಸಂಘದ ಗೌರವಾಧ್ಯಕ್ಷ ಮಾರುತಿ ವಡ್ಡರ, ಕಾರ್ಯದರ್ಶಿ ಬಸವರಾಜ ಗಿರಿನಿವಾಸ, ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಸುರೇಶ ಶಡಶ್ಯಾಳ, ಖಜಾಂಚಿ ಜುಬೇರ ಕೆರೂರ, ಲಿಂಗದಲ್ಲಿ, ಕೂಡಗಿ, ಅರವತ್ತು, ಸಾಬು ಲಿಂಗದಳ್ಳಿ, ಆರ್. ಬಿ. ಗೌಡರ, ಹಳಕೇರಿ, ಹೊಸಮನಿ, ಶೀಳಿನ ಉಣ್ಣಿಬಾವಿ, ಮಾನಪ್ಪ ಪತ್ತಾರ, ವಿಜಯಕುಮಾರ ಪತ್ತಾರ, ಸಂಜೀವ ಗಾಯಕವಾಡ, ಆನಂದ ಉಣ್ಣಿಬಾವಿ, ಪೂರ್ಣಿಮಾ ರೆಡ್ಡಿ, ಗುಲಗಂಜಿ ರಿಯಾಝು, ಹಕೀಮ, ಮಾನಪ್ಪ ಪತ್ತಾರ, ಸಾಬು ಹೊಸಮನಿ ಮುಳ್ಳಾಮಠ, ಮಂಜಣ್ಣಿ ಅಲಬಾಳಮಠ ಸೊನ್ನಗಿ ಉಮರಾಣಿ ಇದ್ದರು.

# ರೂ.52 ಕೋಟಿ ವೆಚ್ಚದ 10 ಕಿ.ಮೀ ಕೊಳವೆ ಮಾರ್ಗ ನಿರ್ಮಾಣಕ್ಕೆ ಒಪ್ಪಿಗೆ

■ ಉದಯರಶ್ಮಿ ದಿನಪತ್ರಿಕೆ



**ಮುದ್ದೇಬಿಹಾಳ, ಸಿಂದಗಿ, ಬಸವನಬಾಗೇವಾಡಿಗೆ ನೀರು ಯೋಜನೆ । ವಿಜಯಪುರಕ್ಕೆ ಕುಡಿವ ನೀರು ಸರಬರಾಜು । ಸಚಿವ ಎಂ.ಬಿ.ಪಾಟೀಲ ಸ್ಪಷ್ಟನೆ**

ಬೆಂಗಳೂರು: ವಿಜಯಪುರ ನಗರಕ್ಕೆ ಅಲಮಟ್ಟಿ ಹಿನ್ನೀರಿನಿಂದ ಕುಡಿಯುವ ನೀರು ಪೂರೈಸುವ ಸುಮಾರು 10.8 ಕಿ.ಮೀ ಉದ್ದದ ಕೊಳವೆ ಮಾರ್ಗ ಶಿಥಿಲವಾಗಿದ್ದು, ಅದನ್ನು ರೂ. 52 ಕೋಟಿ ವೆಚ್ಚದಲ್ಲಿ ಬದಲಿಸಿ, ಹೊಸದಾಗಿ ಎಂ.ಎಸ್. ಪೈಪುಗಳನ್ನು ಅಳವಡಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವರೂ ಆದ ಬೃಹತ್ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ತಿಳಿಸಿದರು.

ವಿಧಾನಸೌಧದ ತಮ್ಮ ಕಚೇರಿಯಲ್ಲಿ ಮಂಗಳವಾರ ಆಯೋಜಿಸಿದ್ದ ವಿಜಯಪುರ ನಗರ ಸೇರಿದಂತೆ ಜಿಲ್ಲೆಯ ವಿವಿಧ ತಾಲ್ಲೂಕು ಕೇಂದ್ರಗಳಲ್ಲಿನ ಕುಡಿಯುವ ನೀರು ಸರಬರಾಜು ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಬಳಿಕ ಅವರು ಸುದ್ದಿಗಾರರಿಗೆ ಈ ಮಾಹಿತಿ ನೀಡಿದರು.

ನಲವತ್ತೂರು ಕಿ.ಮೀ ದೂರದ ಕೊಲ್ಹಾರದಿಂದ ವಿಜಯಪುರಕ್ಕೆ ಕುಡಿಯುವ ನೀರು ಸರಬರಾಜು ಆಗುತ್ತಿದೆ. ಇದರಲ್ಲಿ ಸುಮಾರು 10.8 ಕಿ.ಮೀ ಉದ್ದದ ಪಿ.ಎಸ್.ಸಿ ಕೊಳವೆ ಮಾರ್ಗ ಸಂಪೂರ್ಣ ಹಾಳಾಗಿದ್ದು, ಇದರಿಂದ ನೀರಿನ ಸೋರಿಕೆ ವಿಪರೀತ ಹೆಚ್ಚಾಗಿದೆ. ಇದನ್ನು ಬದಲಿಸಲು ಹಲವು ವರ್ಷಗಳಿಂದ ಪ್ರಯತ್ನಿಸುತ್ತಿದ್ದರೂ ವಿವಿಧ ಕಾರಣಗಳಿಂದಾಗಿ ಆಗಿರಲಿಲ್ಲ. ಆದರೆ, ಈಗ ಅದಕ್ಕೆ ಅಂತಿಮ ಮುದ್ರೆ ಒತ್ತಿದ್ದು, ಹಣ ನೀಡಲು ಹಣಕಾಸು ಇಲಾಖೆ ಒಪ್ಪಿಗೆ ಸೂಚಿಸಿದೆ ಎಂದು ಅವರು ವಿವರಿಸಿದರು.

ಆರಂಭದಲ್ಲಿ ಈ ಕೊಳವೆ ಮಾರ್ಗ ಬದಲಿಸಲು ರೂ. 32 ಕೋಟಿ ವೆಚ್ಚಕ್ಕೆ ಅಂದಾಜು ಮಾಡಲಾಗಿತ್ತು. ಕಾಮಗಾರಿ ವಿಳಂಬವಾದ ಕಾರಣ ಅಂದಾಜು ವೆಚ್ಚ ಹೆಚ್ಚಾಗಿ ರೂ. 52 ಕೋಟಿಗೆ ಏರಿದೆ. ಈಗ ಪರಿಷ್ಕೃತ ಅಂದಾಜು ವೆಚ್ಚಕ್ಕೂ ಹಣಕಾಸು ಇಲಾಖೆ ಒಪ್ಪಿಗೆ ನೀಡಿದ್ದು, ಆ ಪ್ರಕಾರ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದು ಹೇಳಿದರು.

ಇದರ ಜತೆಗೆ ವಿಜಯಪುರ ನಗರಕ್ಕೆ 3ನೇ ಹಂತದ ಕುಡಿಯುವ ನೀರು ಪೂರೈಕೆ ಯೋಜನೆಯ ಭಾಗವಾಗಿ ಆಲಮಟ್ಟಿ ಹಿನ್ನೀರಿನ ರಂಭಾಪುರಿ ಬಳಿ ಜಾಕ್ವೆಲ್ ನಿರ್ಮಾಣ ಅಗತ್ಯವಿದೆ. ಇದು 111 ದಶಲಕ್ಷ ಲೀಟರ್ ನೀರು ಶುದ್ದೀಕರಣ ಸಾಮರ್ಥ್ಯ ಹೊಂದಿರಲಿದೆ. ಈ ಸಂಬಂಧ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಲು 1.36 ಕೋಟಿ ರೂಪಾಯಿ ಒದಗಿಸಲಾಗುವುದು. ತಕ್ಷಣವೇ ಈ ಕಾಮಗಾರಿಯನ್ನೂ ಆರಂಭಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು.

ವಿಜಯಪುರ ನಗರದಲ್ಲಿ ಕೇಂದ್ರ ಸರಕಾರದ ಅಮೃತ್ 2.0 ಯೋಜನೆಯ ಕಾಮಗಾರಿ ವಿಳಂಬವಾಗಿದೆ. ಕಾಮಗಾರಿಯ ಗುತ್ತಿಗೆ ಪಡೆದಿರುವ ಜೈನ್ ಇರಿಗೇಶನ್ ಸಂಸ್ಥೆಗೆ ನೋಟಿಸ್ ನೀಡಲಾಗಿದೆ. ಸಂಸ್ಥೆಯು ಡಿಸೆಂಬರ್ ವೇಳೆಗೆ ಕಾಮಗಾರಿ ಮುಗಿಸುವುದಾಗಿ ಒಪ್ಪಿಕೊಂಡಿದೆ. ಬಳಿಕ, ಬಾಕಿ ಇರುವ ರೂ. 17 ಕೋಟಿ ಬಿಡುಗಡೆ ಮಾಡಲಾಗುವುದು ಎಂದು ಸಚಿವರು ಕಂಪನಿಯ ಪ್ರತಿನಿಧಿಗಳಿಗೆ ಸಭೆಯಲ್ಲಿ ತಿಳಿಸಿದರು.

ವಿಜಯಪುರ ಜಿಲ್ಲೆಯ ಚಡಚಣ, ಆಲಮೇಲ, ಮುದ್ದೇಬಿಹಾಳ, ನಾಲತವಾಡ, ಸಿಂದಗಿ ಮತ್ತು ತಾಳಿಕೋಟೆಗಳಲ್ಲಿ ಅಮೃತ್ 2.0 ಯೋಜನೆಯ ಕಾಮಗಾರಿಗಳು ವಿವಿಧ ಹಂತಗಳಲ್ಲಿವೆ. ಇದರ ಜೊತೆಗೆ ಮುದ್ದೇಬಿಹಾಳ (ರೂ. 17.45 ಕೋಟಿ), ಸಿಂದಗಿ (ರೂ. 26.53 ಕೋಟಿ) ಬಸವನಬಾಗೇವಾಡಿ (ರೂ. 14.58 ಕೋಟಿ) ಪಟ್ಟಣಗಳ ನೀರು ಸರಬರಾಜು ಜಾಲ ನಿರ್ಮಾಣಕ್ಕೆ ಟೆಂಡರ್ ಕರೆದಿದ್ದು, ಸದ್ಯದಲ್ಲೇ ಅಂತಿಮಗೊಳಿಸಲಾಗುವುದು. ತ್ವರಿತವಾಗಿ ಯೋಜನೆಗಳನ್ನು ಅನುಷ್ಠಾನಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸಚಿವರು ಕಟ್ಟಾಜ್ಞೆ ಮಾಡಿದರು.

ಮುಖ್ಯಮಂತ್ರಿಯವರ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯೂ ಆದ ಹಣಕಾಸು ಇಲಾಖೆ ಮುಖ್ಯಸ್ಥರಾದ ಎಲ್.ಕೆ.ಅತೀಕ್, ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ದೀಪಾ ಚೋಳನ್, ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವ್ಯವಸ್ಥಾಪಕ ನಿರ್ದೇಶಕ ಸೆಲ್ವಮಣಿ, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ ಆಯುಕ್ತ ನಾಗೇಂದ್ರ ಪ್ರಸಾದ, ಮುಖ್ಯ ಎಂಜಿನಿಯರ್ ಚಂದ್ರಪ್ಪ ಸೇರಿದಂತೆ ಇತರ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

ವಿಜಯಪುರ ಜಿಲ್ಲಾಧಿಕಾರಿ ಭೂಬಾಲನ್ ಮತ್ತು ಜಿಪಂ ಸಿಇಒ ರಿಷಿ ಆನಂದ ಅವರು ವರ್ಚುವಲ್ ಮೂಲಕ ಸಭೆಯಲ್ಲಿ ಹಾಜರಿದ್ದರು.

## ಬಬಲೇಶ್ವರ, ತಿಕೋಟಾ ಪಟ್ಟಣಗಳಿಗೆ 135 ಎಲ್‌ಪಿಸಿಡಿ ನೀರು

ಪಟ್ಟಣ ಪಂಚಾಯಿತಿಗಳಾಗಿ ಮೇಲ್ದರ್ಜೆಗೆ ಏರಿರುವ ವಿಜಯಪುರ ಜಿಲ್ಲೆಯ ಬಬಲೇಶ್ವರ ಮತ್ತು ತಿಕೋಟಾ ಪಟ್ಟಣಗಳ ಜನತೆಗೆ ಸದ್ಯ 55 ಎಲ್‌ಪಿಸಿಡಿ (ಒಬ್ಬ ವ್ಯಕ್ತಿಗೆ ದಿನಕ್ಕೆ 55 ಲೀಟರ್) ಕುಡಿಯುವ ನೀರು ಪೂರೈಸುತ್ತಿದ್ದು, ಅದನ್ನು 135 ಎಲ್‌ಪಿಸಿಡಿಗೆ ಹೆಚ್ಚಿಸುವ ಸಂಬಃಧ ಯೋಜನೆ ರೂಪಿಸಲಾಗುವುದು. ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಜತೆ ಸೇರಿ ಇದನ್ನು ಮಾಡಲು ಸಚಿವ ಎಂ.ಬಿ.ಪಾಟೀಲ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ ಈ ಎರಡೂ ಪಟ್ಟಣಗಳಿಗೆ 55 ಎಲ್‌ಪಿಸಿಡಿ ನೀರು ಸರಬರಾಜು ಆಗುತ್ತಿದೆ. ಸದ್ಯ ಈ ಎರಡೂ ಊರುಗಳು ಪಟ್ಟಣ ಪಂಚಾಯಿತಿಗಳಾಗಿರುವ ಕಾರಣ ಅದನ್ನು 135 ಎಲ್ಪಿಸಿಡಿಗೆ ಹೆಚ್ಚಿಸುತ್ತಿದ್ದು ಅಚ್ಚುಕಟ್ಟಾಗಿ ಯೋಜನೆ ಜಾರಿ ಮಾಡಬೇಕು ಎಂದು ಸಚಿವರು ಹೇಳಿದರು.

### ವಿಜಯಪುರ ಜಿಲ್ಲೆಯ ಮಠಾಧೀಶರಿಂದ ರೈತರ ಉಳಿವಿಗಾಗಿ ವಕ್ಫ್ ಮಂಡಳಿ ರದ್ದು ಮಾಡಲು ಆಗ್ರಹ

# ಅನ್ನದಾತಗೆ ಅನ್ಯಾಯವಾದರೆ ಸಹಿಸೊಲ್ಲ :ಡಾ.ಪ್ರಭು ಸಾರಂಗದೇವ ಶ್ರೀ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ದೇಶದಲ್ಲಿ ವಕ್ಫ್ ಮಂಡಳಿಯಿಂದಾಗಿ ರೈತರು, ಸಾರ್ವಜನಿಕರ ಮೇಲೆ ಆಗುತ್ತಿರುವ ಅನ್ಯಾಯವನ್ನು ತಡೆಯಲು ಸಂಪೂರ್ಣ ವಕ್ಫ್ ಮಂಡಳಿಯನ್ನೆ ರದ್ದುಗೊಳಿಸಿ, ಇಲ್ಲಿಯವರೆಗೂ ಆಗಿರುವ ಗೆಜೇಟನ್ನು ರದ್ದುಗೊಳಿಸುವಂತೆ ಆಗ್ರಹಿಸಿ ಜಿಲ್ಲೆಯ ಮಠಾಧೀಶರು ಹಾಗೂ ರೈತರು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಹಾಗೂ ಪ್ರಧಾನ ಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ನಗರದ ಬಸವೇಶ್ವರ ವೃತ್ತದಿಂದ ಪಾದಯಾತ್ರೆ ಮೂಲಕ ಆಗಮಿಸಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರಿಗೆ ಮನವಿ ಸಲ್ಲಿಸಿ ನಾಡಿನ ಯಾವ ರೈತರಿಗೂ ಹಾಗೂ ಸಾರ್ವಜನಿಕರಿಗೆ ಅನ್ಯಾಯವಾಗಬಾರದು, ಮಠಾಧೀಶರು ಯಾವಾಗಲೂ ರೈತರಪರ ಕಾಳಜಿ ಉಳ್ಳವರು, ಯಾವೊಬ್ಬ ರೈತರಿಗೆ ಅನ್ಯಾಯವಾದರೂ ನಾವೂ ಸಹಿಸುವುದಿಲ್ಲ, ಕೂಡಲೇ ವಕ್ಫ್ ಸಂಬಂಧಿಸಿದಂತೆ ಎಲ್ಲ ಕೆಲಸಗಳನ್ನು ಕೂಡಲೇ ನಿಲ್ಲಿಸಬೇಕು, ಇಲ್ಲವಾದಲ್ಲಿ ರೈತರ ದೊಡ್ಡ ಕ್ರಾಂತಿಯಲ್ಲಿ ನಾವೂ ಪಾಲ್ಗೊಳುತ್ತೆವೆ ಎಂದು ಸಿಂದಗಿಯ ಸಾರಂಗಮಠದ ಪ್ರಭು ಸಾರಂಗದೇವರು ಹೇಳಿದರು.

ಇದೇ ವೇಳೆ ತಡವಲಗ ಸ್ವಾಮೀಜಿ ಮಾತನಾಡಿ, ಇಡೀ ದೇಶದಲ್ಲಿ ವಕ್ಫ್ ಮಂಡಳಿಯ ಕುತಂತ್ರದಿಂದಾಗಿ ರೈತರು, ಸಾರ್ವಜನಿಕರು ಬೀದಿಗೆ ಬರುವಂತಹ ದೊಡ್ಡಮಟ್ಟದ ಹುನ್ನಾರ ನಡೆದಿರುವುದು ನೋಡಿದ್ದೆವೆ. ಹಾಗೂ ನಮ್ಮ ವಿಜಯಪುರ ಜಿಲ್ಲೆಯಲ್ಲಿ ಸಾಕಷ್ಟು ರೈತರು ಇದರಿಂದ ಸಮಸ್ಯೆಗಳನ್ನ ಎದುರಿಸುತ್ತಿರುವುದು ನೋಡಿದ್ದೇವೆ, ಇದೊಂದು ಕರಾಳ ಕಾಯಿದೆ, ಕೂಡಲೇ ಈ ಮಂಡಳಿಯನ್ನೆ ಸಂಪೂರ್ಣವಾಗಿ ರದ್ದುಮಾಡಬೇಕು ಎಂದರು.

### 60 ಕ್ಕೂ ಹೆಚ್ಚು ಶ್ರೀಗಳು ಭಾಗಿ

ಈ ವೇಳೆ ಬಂಥನಾಳದ ಶ್ರೀಗಳು, ಹತ್ತಳ್ಳಿ ಶ್ರೀಗಳು, ಮಸಬಿನಾಳ ಶ್ರೀಗಳು, ಹಿರೂರ ಶ್ರೀಗಳು, ಕಲಕೇರಿಯ ಶ್ರೀಗಳು, ಕೊರವಾರ ಚೌಕಿಮಠ ಶ್ರೀಗಳು, ಕೆರೂಟಗಿ ಶ್ರೀಗಳು, ವಡವಡಗಿ ಶ್ರೀಗಳು, ಚಬನೂರ ಶ್ರೀಗಳು, ಕುಂಟೋಜಿ ಶ್ರೀಗಳು, ನಾಗಠಾಣ ಶ್ರೀಗಳು, ಮುತ್ತಗಿ ಶ್ರೀಗಳು, ಮಲಘಾಣ ಶ್ರೀಗಳು, ಆಲಮೇಲ ಶ್ರೀಗಳು, ನಾದ ಶ್ರೀಗಳು, ಬೋರಗಿ ಶ್ರೀಗಳು, ಅಥರ್ಗಾ ಶ್ರೀಗಳು, ಮಮದಾಪುರ ಶ್ರೀಗಳು, ಗುಂಡಕನಾಳ ಶ್ರೀಗಳು, ಅಗರಖೇಡ ಶ್ರೀಗಳು, ಇಂಚಗೇರಿ ಶ್ರೀಗಳು, ತಡವಲಗಾ ಶ್ರೀಗಳು, ಶರಶ್ಯಾಡ ಶ್ರೀಗಳು, ಮುಳವಾಡ ಶ್ರೀಗಳು, ಅಂಬಳನೂರ ಶ್ರೀಗಳು, ಇಟಗಿ ಶ್ರೀಗಳು, ಗುಣದಾಳ ಶ್ರೀಗಳು, ಕೋಲಾರ ಶ್ರೀಗಳು, ಕುಮಸಗಿ ಶ್ರೀಗಳು, ಸೇರಿದಂತೆ 60 ಕ್ಕೂ ಹೆಚ್ಚು ಶ್ರೀಗಳು ಪಾಲ್ಗೊಂಡಿದ್ದರು.

ದೇವರ ಹಿಪ್ಪರಗಿ ಸದಯ್ಯನಮಠದ ಗಂಗಾಧರ ಸ್ವಾಮಿಜಿ ಮಾತನಾಡಿ, ಡಾ.ಬಾಬಾಸಾಹೇಬ ಅಂಬೇಡ್ಕರರವರು ಬರೆದಿರುವ ಸಂವಿಧಾನದಡಿ ಭಾರತ ದೇಶ ಜಾತ್ಯಾತೀತ ಹಾಗೂ ಒಂದು ದೇಶಕ್ಕೆ ಒಂದೇ ಕಾನೂನು ಇಲ್ಲಿ ಎಲ್ಲರಿಗೂ ನ್ಯಾಯ ಸಿಗುವ ನಿಟ್ಟಿನಲ್ಲಿ ಮುಂದಾಲೋಚನೆಯಿಂದ ಬರೆದಿರುವ ಸಂವಿಧಾನವನ್ನು ಕೇವಲ ಭಾರತ ಮಾತ್ರವಲ್ಲ ವಿದೇಶಿಗರು ನಮ್ಮ ಸಂವಿಧಾನವನ್ನು ಚೆನ್ನಾಗಿದೆ ಎಂದು ಎತ್ತಿಹಿಡಿದಿದ್ದಾರೆ, ಆದ್ದರಿಂದ ಕೂಡಲೇ ಈ ಕೆಲಸವನ್ನು ರಾಜ್ಯ ಮತ್ತು ಕೇಂದ್ರ ಸರಕಾರ ಕೈಬಿಟ್ಟು ರೈತರನ್ನು ಉಳಿಸುವಂತಹ ಕೆಲಸ ಮಾಡಬೇಕು ಎಂದರು.

ಮನಗೂಳಿ ಸಂಗನಬಸವ ಸ್ವಾಮಿಜಿ ಮಾತನಾಡುತ್ತಾ, ವಕ್ಫ್ ಮಂಡಳಿಯ ಏಕರೂಪದ ಕಾನೂನಿನಡಿ ಅನ್ಯಾಯಕೊಳಗಾದ ರೈತರು ಹಾಗೂ ಸಾರ್ವಜನಿಕರು ಯಾವ ನ್ಯಾಯಾಲಕ್ಕೆ ಹೋದರೂ ನ್ಯಾಯ ಕೇಳುವಂತಿಲ್ಲ, ಕೃಷಿ ಸಾಲ ಪಡೆಯುವಂತಿಲ್ಲ, ಜಮೀನು ಮಾರಾಟ ಹಾಗೂ ವರ್ಗಾವಣೆ ಮಾಡುವಂತಿಲ್ಲ ಎನ್ನುವುದು ದುರದೃಷ್ಟಕರ ಸಂಗತಿ, ಇದರಿಂದ ಇಡೀ ನಾಡಿನ ಅನ್ನದಾತರು ಆತಂಕಕ್ಕೊಳಗಾಗಿದ್ದಾರೆ,

"ನೇಗಿಲಯೋಗಿಯ ರಕ್ಷಣೆಗಾಗಿ ನಾಡಿನ ಎಲ್ಲಾ ಮಠಾಧೀಶರು ಒಟ್ಟಾಗಿ ಕಾವಿಯೋಗಿಗಳ ಹೋರಾಟ ಮಾಡಿ ರೈತರಿಗೆ ಬೆಂಬಲಸೂಚಿಸುತ್ತಿದ್ದು, ರೈತರು ಹಾಗೂ ಮಠಮಾನ್ಯಗಳು ಒಂದೇ ನಾಣ್ಯದ ಎರಡು ಮುಖಗಳಂತೆ, ಈ ನಾಡು ಸುರಕ್ಷಿತವಾಗಿ ಉಳಿಯಬೇಕಾದರೆ ರೈತರು ಉಳಿಯಬೇಕು, ಎಂಬ ದಿಟ್ಟ ಸಂದೇಶವನ್ನು ಕೊಡುತ್ತಿರುವುದು ಎಲ್ಲಾ ಸ್ವಾಮಿಜಿಗಳ ರೈತಪರ ಕಾಳಜಿ ಕಾಣುತ್ತಿದೆ."

■ - ಉಮೇಶ ಕಾರಜೋಳ
ಅಧ್ಯಕ್ಷರು, ಯುವ ಭಾರತ ಸಮಿತಿ

ಕೂಡಲೇ ಇಂತಹ ಕರಾಳ ಕಾಯಿದೆಯನ್ನ ಹೊಂದಿರುವ ವಕ್ಫ್ ಮಂಡಳಿ ನಮ್ಮ ದೇಶಕ್ಕೆ ಮಾರಕವಾಗಿದೆ, ಇದನ್ನು ಬೇರು ಸಮೇತವಾಗಿ ಕಿತ್ತೊಗೆಯಬೇಕು ಎಂದರು.

ಈ ವೇಳೆ ರೈತ ಮುಖಂಡರಾದ ಅರವಿಂದ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು, ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ ಅವರು ನಿರೂಪಿಸಿದರು, ಜಿಲ್ಲಾ ಸಂಚಾಲಕರಾದ ರಾಮನಗೌಡ ಪಾಟೀಲ ವಂದನಾರ್ಪಣೆ ಮಾಡಿದರು.

ರೈತ ಮುಖಂಡರಾದ ಮಹಾದೇವಪ್ಪ ತೇಲಿ, ಪ್ರಕಾಶ ತೇಲಿ, ಸೋಮು ಬಿರಾದಾರ, ಸಂಗಪ್ಪ ಟಕ್ಕೆ, ನಜೀರ ನಂದರಗಿ, ಅರವಿಂದ ರಜಪೂತ, ಮನೋಜ ಮಹಾಂತಮಠ, ಚನ್ನಬಸಯ್ಯ ಹಿರೇಮಠ, ರಾಮಸಿಂಗ ರಜಪೂತ, ಮಹಾಂತೇಶ ಮಮದಾಪುರ, ಭಾಷಾಸಾಬ ಮನಗೂಳಿ, ಸಂಗಮೇಶ ಹುಣಸಗಿ, ಸುಭಾಸ ಸಜ್ಜನ, ವಿರಣ್ಣ ಸಜ್ಜನ, ವಿರೇಶ ಗೊಬ್ಬುರ, ಶಿವಶರಣ ರೆಡ್ಡಿ ಭೈರೊಡಗಿ, ಶಶಿಕಾಂತ ಬಿರಾದಾರ, ಸಿದ್ದನಗೌಡ ಪಾಟೀಲ, ಶರಣಗೌಡ ಪಾಟೀಲ, ಮಹಾದೇವ ಕದಮ, ಭಾಗವಹಿಸಿದ್ದರು.

# ನ. 17 ರಿಂದ 24 ರ ವರೆಗೆ ಐ.ಟಿ.ಎಫ್. ಕ್ರೀಡಾಕೂಟ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಿ:ಜಿಲ್ಲಾಧಿಕಾರಿ



ಕಲಬುರಗಿ: ಕಲಬುರಗಿ ಜಿಲ್ಲೆಯಲ್ಲಿ ಇದೆ ನವೆಂಬರ್ 17 ರಿಂದ 24ರಂದು ನಡೆಯುವ ಪ್ರತಿಷ್ಠತ ಐ.ಟಿ.ಎಫ್. ಕ್ರೀಡಾಕೂಟವನ್ನು ಯಾವುದೇ ಲೋಪದೋಷವಿಲ್ಲದಂತೆ ಕಾರ್ಯಕ್ರಮವನ್ನು ಅನುಷ್ಠಾನ ಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್ ಸೂಚನೆ ನೀಡಿದರು. ಸೋಮವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಲವಾರು ಸಮಿತಿಗಳನ್ನು ರಚಿಸಿದ್ದು. ಸಮಿತಿಗಳ ಪ್ರಕಾರ ಏನೇನೋ ಕೆಲಸಗಳಾಬೇಕು ಪೂರ್ವ ಸಿದ್ಧತೆ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಗೆ ತೀಕ್ಷಣವಾಗಿ ಕಾರ್ಯೋನ್ಮುಖವಾಗುವಂತೆ ಎಚ್ಚರಿಕೆ ನೀಡಿದರು.

ಹಣಕಾಸು ಸಮಿತಿಗಳಾಗಿ ಹಣಕಾಸು ಸಮಿತಿ ಅಧ್ಯಕ್ಷರಾಗಿ ಜಿಲ್ಲಾಧಿಕಾರಿಗಳು ಸಂಚರಕರಾಗಿ ಸಹಾಯಕ ನಿರ್ದೇಶಕರು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮೈದಾನ ವೇದಿಕೆ. ಸೈನ್ ಬೋರ್ಡ್ ಸಿದ್ಧತೆ ಹಾಗೂ ಸ್ವಾಗತ ಸಮಿತಿಗೆ ಪ್ರಧಾನ ವ್ಯವಸ್ಥಾಪಕರು ಜೆಸ್ಕಾಂ ಕಲಬುರಗಿ ಹಾಗೂ ಜಂಟಿ ನಿರ್ದೇಶಕರು ಕೈಗಾರಿಕೆ, ಯೋಜನಾ ನಿರ್ದೇಶಕರು ನಗರಾಭಿವೃದ್ಧಿ ಕೋಶ ಪ್ರಾಧಿಕಾರ ಒಳಗೊಂಡಂತೆ ಸಮಿತಿಯ ಎಲ್ಲಾ ಪೂರ್ವ ಸಿದ್ಧತೆ ಬಗ್ಗೆ ಮಾಹಿತಿ ಪಡೆದು ಅತಿ ಜರೂರಾಗಿ ಕಾರ್ಯೋನ್ಮುಖರಾಗಿ ಕ್ರಮವ ಹಿಸುವಂತೆ ಎಚ್ಚರಿಸಿದರು.

ಮೈದಾನದ ಸ್ವಚ್ಛತೆ, ಉಪ ವೇದಿಕೆಗಳ ಸಿದ್ಧತೆ, ಗ್ರೀನ್ ಮ್ಯಾಗಳ ಅಳವಡಿಕೆ ಮೈಕ್ ಬ್ಯಾರಿಕೇಡ್ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಸೈನ್ ಬೋರ್ಡಗಳನ್ನು ಅಭ್ಯಾಸಕ್ಕೆ ವ್ಯವಸ್ಥೆ ಕಲ್ಪಿಸುವದು. ಚಂದ್ರಶೇಖರ ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಜರಗುವ ಐ.ಟಿ.ಎಫ್. 2024 ಪೂರ್ವಸಿದ್ಧತೆ ಅಭ್ಯಾಸಕ್ಕೆ ವ್ಯವಸ್ಥೆ ಕಲ್ಪಿಸುವುದು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಸಹಾಯಕ ನಿರ್ದೇಶಕ ಸುರೇಶ ಕಂದ್ವರ್ವಾರ್ ಅವರಿಗೆ ಸೂಚಿಸಿದರು.

ಸಾರಿಗೆ ವಾಹನ ನೀಲುಗಡೆ ಸಮಿತಿಯನ್ನು ಉಪ ಪೊಲೀಸ್ ಆಯುಕ್ತರ ನೇತೃತ್ವದಲ್ಲಿ ನಡೆಸಿದ್ದು ಸಾರಿಗೆ ವ್ಯವಸ್ಥೆಯಲ್ಲಿ ಯಾವುದೇ ರೀತಿಯಾಗಿ ವ್ಯತ್ಯಯವಾಗದಂತೆ ಮತ್ತು ಪಾರ್ಕಿಂಗ್ ಅಚ್ಚುಕಟ್ಟಾಗಿ ವ್ಯವಸ್ಥೆಗೊಳಿಸಲು ಸೂಚಿಸಿದರು.

ಆರೋಗ್ಯ ಸಮಿತಿಯು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿದ್ದು ಕ್ರೀಡಾಪಟುಗಳಿಗೆ ಆರೋಗ್ಯ ಸಂಬಂಧಪಟ್ಟಂತೆ ಪೂರ್ವ ತಯಾರಿ ನಡೆಸಲು ಸೂಚಿಸಿದರು.

ಪ್ರಚಾರ ಸಮಿತಿಯನ್ನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಸಿದ್ದು ಹೆಚ್ಚಿನ ರೀತಿಯಲ್ಲಿ ಪ್ರಚಾರಮಾಡುವಂತೆ ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಭಿಮಾನಿಗಳು ಭಾಗ ವಹಿಸುವ ನಿಟ್ಟನಲ್ಲಿ ಪ್ರಾಚಾರ ಮಾಡಲು ಸಭೆಯಲ್ಲಿ ಸೂಚಿಸಿದರು. ಎಲ್ಲಾ ಒಟ್ಟು 14 ಸಮಿತಿಗಳು ಒಟ್ಟುಗೂಡಂತೆ ಸಮನ್ವಯತೆ ಯಿಂದ ಕೆಲಸ ನಿರ್ವಹಿಸಲು ನಿರ್ದೇಶನ ನೀಡಿದರು.

ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತರಾದ ಭುವನೇಶ ಪಾಟೀಲ ದೇವಿದಾಸ,ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಜೆಸ್ಕಾಂ ಪ್ರಧಾನ ವ್ಯವಸ್ಥಾಪಕ ಆಶಪ್ಪ ಪೂಜಾರಿ, ಕಲಬುರಗಿ ಸಹಾಯಕ ಆಯುಕ್ತರಾದ ಸಾಹಿತ್ಯ, ಸೇರಿದಂತೆ, ಡಿ.ಹೆಚ್.ಓ. ಶರಣಬಸಪ್ಪ ಖ್ಯಾತನಾಳ, ಜಿಲ್ಲಾ ಪಂಚಾಯತ್ ನಿರ್ದೇಶಕ ಜಗದೇವಪ್, ಕೈಗಾರಿಕಾ ಇಲಾಖೆ ಉಪನಿರ್ದೇಶಕ ಅಬ್ದುಲ್ ಅಜೀಮ್, ಪೋಲಿಸ್ ಇಲಾಖೆ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಫಂಡರಪುರ ಜಾತ್ರೆಗೆ ವಿಶೇಷ ಸಾರಿಗೆ ವ್ಯವಸ್ಥೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮಹಾರಾಷ್ಟ್ರದ ಫಂಡರಪುರದಲ್ಲಿ ದಿನಾಂಕ:09–11–2024 ರಿಂದ 14–11–2024ರವರೆಗೆ ನಡೆಯುವ ಕಾರ್ತಿಕ ಏಕಾದಶಿ ಜಾತ್ರೆಯ ಅಂಗವಾಗಿ ಜಿಲ್ಲೆಯ ಯಾತ್ರಾರ್ಥಿಗಳಿಗೆ ಉತ್ತಮ ಸಾರಿಗೆ ಸೌಲಭ್ಯ ಕಲ್ಪಿಸುವ ದೃಷ್ಟಿಯಿಂದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಜಯಪುರ ವಿಭಾಗದ ವಿಜಯಪುರ, ಇಂಡಿ, ಸಿಂದಗಿ, ತಾಳಿಕೋಟೆ, ಮುದ್ದೇಬಿಹಾಳ, ಬಸವನ ಬಾಗೇವಾಡಿ ಘಟಕದ ಕೇಂದ್ರ ನಿಲ್ದಾಣದಿಂದ ವಿಶೇಷ ಸಾರಿಗೆ ಕಾರ್ಯಾಚರಣೆ ಮಾಡಲಾಗುವುದು. ಒಂದೇ ಗುಂಪಿನಿಂದ ಪ್ರಯಾಣಿಸುವ ಕನಿಷ್ಠ 55 ಜನ ಪ್ರಯಾಣಿಕರು ಲಭ್ಯವಾದಲ್ಲಿ ಅವರ ಸ್ವ–ಸ್ಥಳದಿಂದಲೇ ನೇರವಾಗಿ ಫಂಡರಾಪುರಕ್ಕೆ ಬಸ್ಸಿನ ವ್ಯವಸ್ಥೆ ಕಲ್ಪಿಸಲಾಗುವುದು.

ಪ್ರಯಾಣಿಕರು ಸಾರಿಗೆ ಸೌಲಭ್ಯ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ಸಂಚಾರ ವ್ಯವಸ್ಥಾಪಕರು ಕೇಂದ್ರ ಬಸ್ ನಿಲ್ದಾಣ ವಿಜಯಪುರ (ಮೊ: 7760992258), ವಿಜಯಪುರ ಘಟಕ–1ರ (7760992263), ವಿಜಯಪುರ ಘಟಕ–2ರ (7760992264), ವಿಜಯಪುರ ಘಟಕ–3ರ (7760914008), ಇಂಡಿ ಘಟಕ (7760992265), ಸಿಂದಗಿ ಘಟಕ (7760992266) ಮುದ್ದೇಬಿಹಾಳ ಘಟಕ (7760992267), ತಾಳಿಕೋಟಿ ಘಟಕ (7760992268), ಬಸವನ ಬಾಗೇವಾಡಿ (7760992269) ಕೇಂದ್ರ ಬಸ್ ನಿಲ್ದಾಣ ವಿಜಯಪುರದ ದೂರವಾಣಿ ಸಂಖ್ಯೆ (08352–251344) ಹಾಗೂ (ಮೊ.7760992258)ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ವಿಜಯಪುರ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ತಲೆ ಕಡಿದು ವ್ಯಕ್ತಿ ಹತ್ಯೆ; ರುಂಡ ನಾಪತ್ತೆ

ಕಲಬುರಗಿ:ನ.04: ವ್ಯಕ್ತಿಯೊಬ್ಬನ ತಲೆ ಕಡಿದು ಭೀಕರವಾಗಿ ಹತ್ಯೆ ಮಾಡಿರುವ ಘಟನೆ ನಗರದ ಹೊರವಲಯದ ಬಬಲಾದ್ ಗ್ರಾಮದ ಬಳಿ ನಡೆದಿದೆ.

ಕೊಲೆ ಮಾಡಿದ ಬಳಿಕ ಶವ ತೊಗರಿ ಹೊಲದಲ್ಲಿ ಎಸೆಯಲಾಗಿದ್ದು, ಸ್ಥಳದಲ್ಲಿ ರುಂಡ ಪತ್ತೆಯಾಗದಿರುವ ಕಾರಣ ಪೊಲೀಸರು ರುಂಡ ಪತ್ತೆ ಹಚ್ಚುವ ಕಾರ್ಯ ಆರಂಭಿಸಿದ್ದಾರೆ.ಹತ್ಯೆಯಾಗಿರುವ ವ್ಯಕ್ತಿ ಸುಮಾರು 36 ವರ್ಷ ವಯಸ್ಸಿನ ಆಸುಪಾಸಿನಲ್ಲಿದ್ದು, ಬಬಲಾದ ಗ್ರಾಮದ ಹೊರವಲಯದ ನಿರ್ಜನ ಪ್ರದೇಶದಲ್ಲಿ ಈ ಕೃತ್ಯ ಎಸಗಲಾಗಿದೆ.

ಹಂತಕರ ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದು, ಹುಡುಕಾಟ ನಡೆಸುತ್ತಿದ್ದಾರೆ. ಘಟನಾ ಸ್ಥಳಕ್ಕೆ ಸಿಟಿ ಪೊಲೀಸ್ ಕಮಿಷನರ್ ಶರಣಪ್ಪ ಎಸ್.ಡಿ ಮತ್ತು ಡಿಸಿಪಿ ಕನ್ನಿಕಾ ಸಿಕ್ರಿವಾಲ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಘಟನೆ ಕುರಿತು ಸಬ್ ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನ.12ರಂದು ಜನನಿ ಮಂಗಲ ಕಾರ್ಯಾಲಯ ಲೋಕಾರ್ಪಣೆ

■ ಉದಯರಶ್ಮಿ ದಿನಪತ್ರಿಕೆ



ಯಡ್ರಾಮಿ: ಪಟ್ಟಣದ ಹೊರವಲಯದ ಕಡಕೋಳ ಕ್ರಾಸ್ ಹತ್ತಿರ ನೂತನವಾಗಿ ನಿರ್ಮಿಸಿದ ಜನನಿ ಮಂಗಲ ಕಾರ್ಯಾಲಯ ಲೋಕಾರ್ಪಣೆ ಕಾರ್ಯಕ್ರಮ ನಿಮಿತ್ತ ನ.12 ಮತ್ತು ನ.13 ರಂದು ವಿವಿಧ ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮಂಗಲ ಕಾರ್ಯಾಲಯ ಉದ್ಘಾಟನೆ ಸಮಾರಂಭದ ಸ್ವಾಗತ ಸಮಿತಿ ಅಧ್ಯಕ್ಷ ದೇವಿಂದ್ರಪ್ಪಗೌಡ ಸರಕಾರ ತಿಳಿಸಿದರು.

ಯಡ್ರಾಮಿ ಪಟ್ಟಣದ ಜನನಿ ಮಂಗಲ ಕಾರ್ಯಾಲಯದಲ್ಲಿ ಸೋಮವಾರ ಪತ್ರಿಕಾಘೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ನ.12ರಂದು ಬೆ.7ಕ್ಕೆ ಆಲೂರು ಸಂಸ್ಥಾನ ಮಠದ ಶ್ರೀ ಕೆಂಚವೃಷಭೇಂದ್ರ ಶಿವಾಚಾರ್ಯರು ಇವರಿಂದ ಜಂಗಮ ವಟುಗಳಿಗೆ ಅಯ್ಯಾಚಾರ ಹಾಗೂ ಲಿಂಗದೀಕ್ಷೆ ಕಾರ್ಯಕ್ರಮ ನಡೆಯಲಿದೆ. ಮದ್ಯಾಹ್ನ 3ಕ್ಕೆ ಯಡ್ರಾಮಿಯ ಶ್ರೀ ಮುರಘೇಂದ್ರ ಶಿವಯೋಗಿ ವಿರಕ್ತಮಠದಿಂದ ಜನನಿ ಮಂಗಲ ಕಾರ್ಯಾಲಯದವರೆಗೆ ಮುತ್ತೈದೆಯರ ಕುಂಭ, ಕಳಸ, ವಾದ್ಯ, ಭಜನೆ ವೈಭವದೊಂದಿಗೆ ಉಜ್ಜಯಿನಿ ಜಗದ್ಗುರುಗಳ ಸಾರೋಟು ಮೆರವಣಿಗೆ ನಡೆಯಲಿದೆ. ಸಾಯಂಕಾಲ 6.30ಕ್ಕೆ ಉಜ್ಜಯಿನಿ ಪೀಠದ ಜಗದ್ಗುರು ಸಿದ್ದಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರ ಪರುಷ ಹಸ್ತದಿಂದ ಮಂಗಲ ಕಾರ್ಯಾಲಯ ಉದ್ಘಾಟನೆ ನೆರವೇರಲಿದೆ. ಸಾ.7ಕ್ಕೆ ಧರ್ಮಸಭೆ ನಡೆಯಲಿದ್ದು, ಧಿವ್ಯ ಸಾನಿಧ್ಯವನ್ನು ಉಜ್ಜಯಿನಿ ಪೀಠದ ಜಗದ್ಗುರು ಸಿದ್ದಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾಗಣಗೇರಾ ಬ್ರಹನ್ಮಠದ ಡಾ.ವಿಶ್ವರಾಧ್ಯ ಶಿವಾಚಾರ್ಯರು ವಹಿಸಲಿದ್ದು, ಯಡ್ರಾಮಿ ವಿರಕ್ತಮಠದಶ್ರೀಸಿದ್ದಲಿಂಗಮಹಾಸ್ವಾಮಿಗಳು ನೇತೃತ್ವ ವಹಿಸುವರು. ನಾಡಿನ ಹರಗುರು ಚರಮೂರ್ತಿಗಳ ಸಮ್ಮುಖದಲ್ಲಿ ನಡೆಯುವ ಧರ್ಮಸಭೆಯಲ್ಲಿರಾಜಕೀಯಮುಖಂಡರು, ಗಣ್ಯಮಾನ್ಯರು ಪಾಲ್ಗೊಳ್ಳಲಿದ್ದಾರೆ.

ನ.13ರ ಬುಧವಾರ ಬೆ.12.09ಕ್ಕೆ ಜನನಿ ಮಂಗಲ ಕಾರ್ಯಾಲಯದಲ್ಲಿ ಸಾಮೂಹಿಕ ವಿವಾಹ ಕಾರ್ಯಕ್ರಮ ನಡೆಯಲಿದೆ. ಈ ಸಮಾರಂಭದಲ್ಲಿ ಸರ್ವರು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಜಗದ್ಗುರುಗಳ ದರ್ಶನಾಶೀರ್ವಾದ ಪಡೆದುಕೊಳ್ಳಬೇಕಾಗಿ ಸ್ವಾಗತ ಸಮಿತಿ ಸದಸ್ಯರು ವಿನಂತಿಸಿಕೊಂಡಿದ್ದಾರೆ. ಈ ವೇಳೆ ಸ್ವಾಗತ ಸಮಿತಿ ಗೌರವಾಧ್ಯಕ್ಷ ಲಿಂಗನಗೌಡ ಪೊಲೀಸಪಾಟೀಲ, ಸಂಚಾಲಕ ಚಂದ್ರಶೇಖರ ಪುರಾಣಿಕ, ಅಣ್ಣಯ್ಯ ಹಿರೇಮಠ ಮಾತನಾಡಿದರು. ಪ್ರಮುಖರಾದ ಲಿಂಗನಗೌಡ ಪೊಲೀಸಪಾಟೀಲ, ಸಿದ್ರಾಮಪ್ಪಗೌಡ ಮಾಲಿಪಾಟೀಲ, ಮಲ್ಹಾರಾವ ಕುಲಕರ್ಣಿ, ಮಹಾನಿಂಗಪ್ಪಗೌಡ ಬಂಡೆಪ್ಪಗೌಡ್ರ, ತಿಪ್ಪಣ್ಣ ಸಾಹು ಹೆಬ್ಬಾಳ, ಚಂದ್ರಶೇಖರ ಪುರಾಣಿಕ, ಅಪ್ಪುಗೌಡ ಪಾಟೀಲ, ಬಸಲಿಂಗಪ್ಪ ಸಾಹು ಅಂಕಲಕೋಟಿ, ದಯಾನಂದ ಹಿರೇಮಠ ನಾಗರಹಳ್ಳಿ, ಶಂಕರಗೌಡ ಇನಾಮದಾರ, ಇಬ್ರಾಹಿಂಸಾಬ್ ಉಸ್ತಾದ, ಬಾಬಾಫರೀದ ಮಳ್ಳಿಕರ, ರಜಾಕ ಮನಿಯಾರ, ಹಯ್ಯಾಳಪ್ಪ ಗಂಗಾಕರ, ಬಸವರಾಜ ಪವಾರ, ಬಸನಗೌಡ ಪಾಟೀಲ ಕಡಕೋಳ, ಹಳ್ಳೆಪ್ಪ ನಾಟಿಕಾರ, ಬಸವರಾಜ ಹೂಗಾರ, ಶಂಬುಲಿಂಗ ಸಾಹು ತಾಳಿಕೋಟಿ, ಮಲ್ಲಿಕಾರ್ಜುನ ಹಲಕರ್ಟಿ, ನಿಂಗನಗೌಡ ಜವಳಗಿ, ಹಾಗರಗುಂಡಗಿ, ಅಮೀರಪಟೇಲ ಚಿಂಚೋಳಿ, ಈರಣ್ಣ ಸುಂಕದ, ಆನಂದ ಯತ್ನಾಳ, ರೇವಣಸಿದ್ದಪ್ಪ ಅಂಕಲಕೋಟಿ, ಚನ್ನವೀರ ತಾಳಿಕೋಟಿ ಇದ್ದರು.

# ಜಲಮೂಲಗಳ ಅತಿಕ್ರಮಣಗಳನ್ನು ತೆರವುಗೊಳಿಸಲು ತ್ವರಿತ ಕ್ರಮ ಕೈಗೊಳ್ಳಿ: ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ



ಕಲಬುರಗಿ:ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿನ ಜಲಮೂಲಗಳ ಅತಿಕ್ರಮಣವನ್ನು ತೆರವುಗೊಳಿಸಲು ತ್ವರಿತವಾಗಿ ಅಗತ್ಯ ಕ್ರಮ ಕೈಗೊಳ್ಳುವಂತೆ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ ನೀಡಿದ್ದಾರೆ.


ಈ ಸಂಬಂಧ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಬರೆದಿರುವ ಪತ್ರದಲ್ಲಿ ನಮ್ಮ ಜಲಾಶಯಗಳ ಸಂರಕ್ಷಣೆಯಿಂದ ಪರಿಸರ ಸಮತೋಲನವನ್ನು ಕಾಪಾಡಬಹುದು ಎಂದು ಸಚಿವರು ಹೇಳಿರುವರಲ್ಲದೆ, ಕೃಷಿ ಚಟುವಟಿಕೆಗಳನ್ನು ಬೆಂಬಲಿಸುವುದು ಹಾಗೂ ನಮ್ಮ ಸಮುದಾಯಗಳಿಗೆ ಜಲ ಭದ್ರತೆಯನ್ನು ಖಚಿತಪಡಿಸುವುದು ಆದ್ಯತೆಯ ಕ್ರಮವಾಗಬೇಕು ಎಂದು ತಿಳಿಸಿದ್ದಾರೆ.

ಗ್ರಾಮ ಪಂಚಾಯತಿ ವ್ಯಾಪ್ತಿಯ ಅನೇಕ ಜಲಾಶಯಗಳಲ್ಲಿ ಅತಿಕ್ರಮಣಗಳಾಗಿರುವ ಬಗ್ಗೆ ತಮಗೆ ಮಾಹಿತಿ ಬಂದಿದ್ದು ಈ ಗಂಭೀರ ವಿಷಯವನ್ನು ಗಮನದಲ್ಲಿಟ್ಟುಕೊಂಡು, ತಕ್ಷಣವೇ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಲು ಅಪರ ಮುಖ್ಯ ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡಿದ್ದಾರೆ. ಜಲಮೂಲಗಳ ಅತಿಕ್ರಮಣವನ್ನು ಗುರುತಿಸುವುದು ಹಾಗೂ ವರದಿ ಸಲ್ಲಿಸುವುದು: ಗ್ರಾಮ ಪಂಚಾಯತ್ ವ್ಯಾಪ್ತಿಯ ಎಲ್ಲಾ ಜಲಮೂಲಗಳ ಸಮೀಕ್ಷೆಯನ್ನು ನಡೆಸಿ ಅತಿಕ್ರಮಣಗಳನ್ನು ಗುರುತಿಸುವುದು ಹಾಗೂ ವರದಿಯನ್ನು ಸಲ್ಲಿಸುವುದು. ಈ ವರದಿಯಲ್ಲಿ ಅತಿಕ್ರಮಣದ ವ್ಯಾಪ್ತಿ, ಭಾಗವಹಿಸಿದ ವ್ಯಕ್ತಿಗಳು ಮತ್ತು ಸ್ಥಳೀಯ ಪರಿಸರ ಮತ್ತು ಸಮುದಾಯದ ಮೇಲೆ ಪರಿಣಾಮ ಉಟು ಮಾಡಿರುವ ವಿವರಗಳನ್ನು ತಿಳಿಸುವುದು. ಅತಿಕ್ರಮಣವನ್ನು ತೆರವುಗೊಳಿಸಲು ಕೈಗೊಂಡ ಕ್ರಮಗಳ ವಿವರ: ಅತಿಕ್ರಮಣಗಳನ್ನು ಗುರುತಿಸಿದ ಕೂಡಲೇ ತೆರವೊಗೊಳಿಸಲು ಕ್ರಮ ಕೈಗೊಳ್ಳುವುದು. ಈ ಕಾರ್ಯಾಚರಣೆಗಾಗಿ ಸಂಬಂಧಿಸಿದ ಎಲ್ಲಾ ಸ್ಥಳೀಯ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸುವುದು ಹಾಗೂ ತೆರವು ಕಾರ್ಯಾಚರಣೆಯನ್ನು ಸುಗಮವಾಗಿ ಮತ್ತು ಪರಿಣಾಮಕಾರಿಯಾಗಿ ಕೈಗೊಳ್ಳುವುದು.

### ಕಲ್ಲಿನ ಕಣಿಯಿಂದಾಗಿ ಕೋಲಾರ ಬ್ರೀಡ್ಜ್ ಅಪಾಯದಲ್ಲಿ। ರೈತರಿಂದ ಜಿಲ್ಲಾಧಿಕಾರಿಗಳಿಗೆ ಮನವಿ

# ಕಲ್ಲಿನ ಕಣಿಯಿಂದಾಗಿ ರೈತರಿಗೆ ಸಮಸ್ಯೆ :ಬಂದ್ ಮಾಡಲು ಆಗ್ರಹ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಜಿಲ್ಲೆಯ ಕೋಲಾರನ ಸರ್ವೆ ನಂಬರ 718ರಲ್ಲಿ ಕಲ್ಲಿನ ಕಣಿಯಿಂದಾಗಿ ಸುತ್ತಮುತ್ತಲಿನ ರೈತರಿಗೆ ಹಾಗೂ ಜನಸಾಮಾನ್ಯರಿಗೆ ಹಾಗೂ ಸಮೀಪದಲ್ಲಿರುವ ರಾಜ್ಯದ ಎರಡನೇ ಅತಿ ದೊಡ್ಡ ಸೇತುವೆಗೆ ಕೂಡಾ ಅನಾಹುತ ಸಂಭವಿಸಬಹುದು, ಆದ್ದರಿಂದ ಕೂಡಲೇ ಈ ಕಲ್ಲಿನ ಕ್ವಾರಿಯನ್ನು ಬಂದ್ ಮಾಡಬೇಕೆಂದು ಕೋಲಾರ ಭಾಗದ ರೈತರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಈ ವೇಳೆ ಮಾತನಾಡಿದ ತಾಲೂಕಾ ಅಧ್ಯಕ್ಷ ಸೋಮು ಬಿರಾದಾರ ಅವರು, ಇಲ್ಲಿ ದೊಡ್ಡ ದೊಡ್ಡ ಕಲ್ಲುಗಳನ್ನು ಬ್ಲಾಸ್ಟ್ ಮಾಡುವುದರಿಂದ ಅಕ್ಕಪಕ್ಕದ ರೈತರ ಜಮೀನುಗಳಲ್ಲಿ ವಾಸಿಸುವ ಗುಡಿಸಲು ಹಾಗೂ ಮನೆಗಳ ಮೇಲೆ ಬೀಳುತ್ತಿದ್ದು, ಇದರಿಂದ ಸಾರ್ವಜನಿಕರು ಭಯದಲ್ಲಿ ಬದುಕುವಂತಾಗಿದೆ, ಕೊಲಾರ ಬ್ರೀಜ್ ಕೂಡಾ ಸಮೀದಲ್ಲಿ ಇರುವುದುರಿಂದ ಈ ಕ್ವಾರಿಯನ್ನು ಬಂಧ ಮಾಡಬೇಕು ಜೊತೆಗೆ ಈ ಭಾಗದಲ್ಲಿ ಮುಂದೆಕೂಡಾ ಯಾರಿಗೂ ಅನುಮತಿ ನೀಡಬಾರದು ಎಂದರು. ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಅವರು ಮಾತನಾಡುತ್ತಾ, ಕೂಡಲೇ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳನ್ನು ಸ್ಥಳಕ್ಕೆ ಕಳುಹಿಸಿ ಅಲ್ಲಿ ಆಗುಹೋಗುವ ಸಮಸ್ಯೆಗಳ ಕುರಿತು ನೈಜವಾಗಿ ಪರೀಕ್ಷೆ ಮಾಡಬೇಕು, ಅದರಿಂದ ಆಗುವ ಅನಾಹುತಗಳನ್ನು ಎಚ್ಚೆತ್ತು ಕೂಡಲೇ ಅವುಗಳ ವಿರುದ್ಧ ಕಾನೂನ ಕ್ರಮ ಕೈಗೊಳ್ಳಬೇಕು ಎಂದರು.

ಈ ವೇಳೆ ಮಲ್ಲಿಕಾರ್ಜುನ ಮಹಾಂತಮಠ, ಕಲ್ಲಪ್ಪ ಗಿಡ್ಡಪ್ಪಗೊಳ, ಶ್ರೀಶೈಲ ಸೊನ್ನದ, ಯಲ್ಲಪ್ಪ ಸೋನ್ನದ, ಶಶಿಕಾಂತ ಬಿರಾದಾರ, ಮಲ್ಲಿಕಾರ್ಜುನ ಸೊನ್ನದ, ವಿರುಪಾಕ್ಷಿ ಅಥಣಿ, ಸಂಗಪ್ಪ ಅಥಣಿ, ಸಂಗಪ್ಪ ಟಕ್ಕೆ, ಮಹಾದೇವಪ್ಪ ತೇಲಿ, ಪ್ರಕಾಶ ತೇಲಿ, ರಾಮನಗೌಡ ಪಾಟೀಲ , ಪುಂಡಲಿಕ ಸೊನ್ನದ, ವಿ.ಎಂ. ಮನ್ನಿಕೇರಿ, ಹಣಮಂತ ಸೋನ್ನದ, ಮಹಾದೇವ ಕದಮ, ಸಂಗಮೇಶ ಹುಣಸಗಿ, ಸುಭಾಸ ಸಜ್ಜನ, ಜಯಸಿಂಗ ರಜಪೂತ, ಲಚ್ಚಾರುಮ ರಜಪೂತ, ಸೇರಿದಂತೆ ಅನೇಕರು ಇದ್ದರು,

### ವಿಜಯಪುರ ಮಹಾನಗರ ಪಾಲಿಕೆ ವಾರ್ಡ-29ರ

# ಉಪ ಚುನಾವಣೆಗೆ ಅಧಿಸೂಚನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮಹಾನಗರ ಪಾಲಿಕೆಯ ವಿವಿಧ ಕಾರಣಗಳಿಂದ ಖಾಲಿ ಇರುವ ವಾರ್ಡ ನಂ.29ರ ಸ್ಥಾನಕ್ಕೆ ಉಪ ಚುನಾವಣೆಗೆ ಜಿಲ್ಲಾ ಚುನಾವಣಾಧಿಕಾರಿಗಳೂ ಆದ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಅಧಿಸೂಚನೆ ಹೊರಡಿಸಿದ್ದಾರೆ. ನಾಮಪತ್ರ ಸಲ್ಲಿಸಲು ನವೆಂಬರ್ 11, 2024 ಕೊನೆಯ ದಿನವಾಗಿದ್ದು, ನಾಮಪತ್ರಗಳ ಪರಿಶೀಲನಾ ಕಾರ್ಯ ನವೆಂಬರ್ 12,2024 ರಂದು ನಡೆಯಲಿದೆ. ನವೆಂಬರ್ 14,2024ರಂದು ಉಮೇದುವಾರಿಕೆ ಹಿಂಪಡೆಯಲು ಕೊನೆಯ ದಿನವಾಗಿದ್ದು, ಅವಶ್ಯವಿದ್ದಲ್ಲಿ ನವೆಂಬರ್ 23, 2024 ರಂದು ಬೆಳಿಗ್ಗೆ 7 ರಿಂದ ಸಂಜೆ 5 ಗಂಟೆವರೆಗೆ ಮತದಾನ ನಡೆಯಲಿದೆ. ನವೆಂಬರ್ 26,2024 ರಂದು ಚುನಾವಣೆ ಕಾರ್ಯ ಮುಕ್ತಾಯಗೊಳ್ಳುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಕ್ಫ್ ಕಾಯ್ದೆ ರದ್ದು ಪಡಿಸಲು ಆಗ್ರಹಿಸಿ ರೈತಸಂಘ ಮನವಿ



■ ಉದಯರಶ್ಮಿ ದಿನಪತ್ರಿಕೆ

ಬಸವನಬಾಗೇವಾಡಿ: ಪಟ್ಟಣದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕು ಘಟಕವು ತಲೆ–ತಲಾಂತರಗಳಿಂದ ಉಳುಮೆ ಮಾಡಿಕೊಂಡು ಬರುತ್ತಿರುವ ರೈತ ಬಾಂಧವರ ಜಮೀನುಗಳ ಪಹಣಿಯಲ್ಲಿ ಕರ್ನಾಟಕ ವಕ್ಫ್ ಮಂಡಳಿ ಎಂದು ನಮೂದಿಸುತ್ತಿರುವದನ್ನು ಸರ್ಕಾರ ರದ್ದುಪಡಿಸಬೇಕು. ವಕ್ಫ್ ಕಾಯ್ದೆಯನ್ನು ರದ್ದು ಪಡಿಸಬೇಕೆಂದು ಆಗ್ರಹಿಸಿ ತಹಸೀಲ್ದಾರ ವೈ. ಎಸ್.ಸೋಮನಕಟ್ಟಿ ಅವರ ಮುಖಾಂತರ ಸರ್ಕಾರಕ್ಕೆ ಮನವಿ ಸಲ್ಲಿಸಿತು. ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಜಮಾಯಿಸಿದ ರೈತ ಬಾಂಧವರು ಮೆರವಣಿಗೆ ಮೂಲಕ ತಹಸೀಲ್ದಾರ ಕಚೇರಿಗೆ ಆಗಮಿಸಿ ಕೆಲ ಹೊತ್ತು ಧರಣಿ ನಡೆಸಿ ವಕ್ಫ್ ಕಾಯ್ದೆ ವಿರುದ್ಧ ಘೋಷಣೆ ಕೂಗಿದರು. ಈ ಸಂದರ್ಭದಲ್ಲಿ ರೈತ ಸಂಘದ ತಾಲೂಕಾಧ್ಯಕ್ಷ ವಿನೋದ ಪವಾರ ಮಾತನಾಡಿ, ರೈತರ ಜಮೀನುಗಳ ಪಹಣಿಯ ಹಕ್ಕುಗಳ ಕಾಲಂನಲ್ಲಿ ಕರ್ನಾಟಕ ವಕ್ಫ್ ಮಂಡಳಿ ಹೆಸರು ನಮೂದಿಸುವ ಮೂಲಕ ರೈತರನ್ನು ಒಕ್ಕಲೆಬ್ಬಿಸುವ ಹುನ್ನಾರ ನಡೆಯುತ್ತಿದೆ. ರೈತರಿಗೆ ಆಗುತ್ತಿರುವ ಅನ್ಯಾಯವನ್ನು ತಡೆಗಟ್ಟಲು ವಕ್ಫ್ ಮಂಡಳಿಯ 1995 ರ ಕಾಯ್ದೆಯನ್ನು ರದ್ದುಪಡಿಸಬೇಕು. ಇದು ಸಮಾನತೆ, ಏಕತೆ, ನ್ಯಾಯದ ತತ್ವಗಳಿಗೆ ನೇರ ಸಂಘರ್ಷಕ್ಕಿಡು ಮಾಡಿದಂತಾಗಿದೆ. ರೈತರ ಅನುಮತಿಯಿಲ್ಲದೇ ರೈತರ ಜಮೀನುಗಳ ಪಹಣಿಗಳಲ್ಲಿ ಕರ್ನಾಟಕ ವಕ್ಫ್ ಮಂಡಳಿಯ ಆಸ್ತಿಯೆಂದು ನಮೂದಿಸುತ್ತಿರುವದು ರೈತರಿಗೆ ಕೊಡಲಿ ಪೆಟ್ಟು ನೀಡಿದಂತದಾಗಿದೆ.

ಇದನ್ನು ಸರ್ಕಾರ ಸರಿಪಡಿಸಿ ರೈತರಿಗೆ ನ್ಯಾಯ ಒದಗಿಸಬೇಕೆಂದು ಆಗ್ರಹಿಸಿದರು.

ಧರಣಿಯಲ್ಲಿ ಆನಂದ ಲಮಾಣಿ, ಶಿವರಾಜ ಲಮಾಣಿ, ಸಚೀನ ಚವ್ಹಾಣ, ಪಿಂಟು ಲಮಾಣ, ಮೀಟು ಜಾಧವ, ಶ್ರೀಕಾಂತ ರಾಠೋಡ, ಕಾಶೀನಾಥ ರಾಠೋಡ, ಸಾಗರ ಚವ್ಹಾಣ, ರಮೇಶ ರಾಠೋಡ, ಕೃಷ್ಣಾ ಚವ್ಹಾಣ, ಮೋಹನ ರಾಠೋಡ ಇತರರು ಇದ್ದರು.

# ಐ.ಟಿ.ಐ ತರಬೇತಿದಾರರು ತರಬೇತಿಯಲ್ಲಿ ಜ್ಞಾನ ಬೆಳೆಸಿಕೊಂಡು ಕೌಶಲ್ಯ ರತ್ನಗಳಾಗಬೇಕು:ಹಳಗೋದಿ



ಕಲಬುರಗಿ:ಸರ್ಕಾರಿ ಐ.ಟಿ.ಐ. ತರಬೇತಿ ಸಂಸ್ಥೆಯಲ್ಲಿ ತರಬೇತಿ ಪಡೆಯುವ ತರಬೇತಿದಾರರು ತರಬೇತಿಯಲ್ಲಿ ಕೌಶಲ್ಯ ಜ್ಞಾನ ಬೆಳೆಸಿಕೊಂಡು ಕೌಶಲ್ಯ ರತ್ನಗಳಾಗಬೇಕೆಂದು ಸ್ಥಳೀಯ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಯ ನಿಲಯ ಪಾಲಕರಾದ ಡಾ.ನಾಗರಾಜ.ಸಿ.ಹಳೆಗೊಡಿ ಕರೆ ನೀಡಿದರು.

ಅವರು ಇತ್ತೀಚೆಗೆ ಚೌಡಾಪೂರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ 2024 ನೇ ವರ್ಷದಲ್ಲಿ ಉತ್ತೀರ್ಣಗೊಂಡ ತರಬೇತಿದಾರರಿಗೆ ಪ್ರಮಾಣ ಪತ್ರ ವಿತರಿಸುವ ಘಟಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ವಿಜ್ಞಾನ, ತಂತ್ರಜ್ಞಾನ, ಬಾಹ್ಯಾಕಾಶ, ಐ.ಟಿ ಮುಂತಾದ ಕ್ಷೇತ್ರಗಳಲ್ಲಿ ಪರಿಣಿತ ತಂತ್ರಜ್ಞರ ಬೇಡಿಕೆ ಹೆಚ್ಚಿದೆ. ಇಂಜನಿಯರಿಂಗ್, ಡಿಪ್ಲೋಮಾ, ಪದವಿಗಳಿಗೆ ಐ.ಟಿ.ಐ.ನಲ್ಲಿ ಕಲಿಯುವ ತರಬೇತಿ ತುಂಬಾ ಸಹಕಾರಿಯಾಗಲಿದೆ ಎಂದರು.

ಅಫಜಲಪುರ ತರಬೇತಿ ಸಂಸ್ಥೆಯ ಪ್ರಾಚಾರ್ಯ ಸುಬಾಷ ಯವಳೆ ಅಧ್ಯಕ್ಷತೆವಹಿಸಿದರು. ಹಿರಿಯ ಉಪನ್ಯಾಸಕ ಸಿದ್ದಪ್ಪಾ ಜಮಾದಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಿರಿಯ ತರಬೇತಿ ಅಧಿಕಾರಿ ದೇವಿಂದ್ರಪ್ಪ ಕುಂಬಾರ ಸ್ವಾಗತಿಸಿದರು. ಹಿರಿಯ ತರಬೇತಿದಾರ ಕುಮಾರ ದತ್ತು ಕಾರ್ಯಕ್ರಮ ನಿರೂಪಿಸಿದರು. ಟಾಟಾ ವೃತ್ತಿಯ ಸಿಬ್ಬಂದಿ ಪ್ರಭುಲಿಂಗ ಎಸ್.ಎಂ.ಇ ವಂದಿಸಿದರು. 2024 ನೇ ಸಾಲಿನಲ್ಲಿ ಉತ್ತೀರ್ಣಗೊಂಡ ತರಬೇತಿದಾರರಿಗೆ ಪ್ರಮಾಣ ಪತ್ರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಸಿಬ್ಬಂದಿ ಆನಂದ ಅವರು ಉಪಸ್ಥಿತರಿದ್ದರು.

# ನಾಳೆ ವಿಶೇಷಚೇತನ ನೌಕರರಿಂದ ಬೇಡಿಕೆ ದಿನಾಚರಣೆ

ಕಲಬುರಗಿ : ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ಸರಕಾರಿ ಅಂಗವಿಕಲ ನೌಕರರ ಸಂಘದ ವತಿಯಿಂದ ಇದೇ ನ.5ರಂದು ಬೆಳಗ್ಗೆ 10.30ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಎದುರು ಬೇಡಿಕೆಗಳ ದಿನಾಚರಣೆ ಹಮ್ಮಿಕೊಳ್ಳಲಾಗುತ್ತಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಸಂತೋಷ್ ದಾಯಿಗೋಡೆ ತಿಳಿಸಿದರು.




ಇಲ್ಲಿನ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಏಳನೇ ವೇತನ ಆಯೋಗದ ಪರಿಷ್ಕೃತ ಶ್ರೇಣಿಯಲ್ಲಿ ವಿಕಲಚೇತನ ನೌಕರರಿಗೆ ಶೇ.6ರಷ್ಟು ಸಂಚಾರಿ ಭತ್ಯೆ ಸೇರ್ಪಡೆ ಮಾಡಬೇಕು. ಈ ನಿಟ್ಟಿನಲ್ಲಿ ಕೂಡಲೇ ರಾಜ್ಯ ಸರಕಾರ ಆದೇಶ ಹೊರಡಿಸಬೇಕು ಎಂಬುದು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಈ ದಿನಾಚರಣೆ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ ಎಂದರು.

ವಿಕಲಚೇತನ ಸರಕಾರಿ ನೌಕರರಿಗೆ ವೇತನ ಆಯೋಗ ನೀಡಿದ ಶಿಫಾರಸುಗಳನ್ನು ಯಥಾವತ್ತಾಗಿ ಜಾರಿಗೊಳಿಸಬೇಕು. ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ ಅಂಗವಿಕಲ ನೌಕರರಿಗೆ ಕೇಂದ್ರ ಸರಕಾರ ಡಿಸೆಂಬರ್ 28, 2023ರಲ್ಲಿ ಎ,ಬಿ,ಸಿ ಹಾಗೂ ಡಿ ವೃಂದದ ಹುದ್ದೆಗಳಿಗೆ ಬಡ್ತಿಯಲ್ಲಿ ಮೀಸಲಾತಿ ಜಾರಿಗೊಳಿಸಿದೆ. ಇದರ ಜೊತೆಗೆ ರಾಜ್ಯ ಸರಕಾರ ಸಹ ಸಿ ಮತ್ತು ಡಿ ವೃಂದದ ಹುದ್ದೆಗಳಿಗೆ ಮಾತ್ರ ಮೀಸಲಾತಿ ನೀಡಿದೆ. ಹಾಗಾಗಿ, ಎ ಮತ್ತು ಬಿ ವೃಂದದ ಹುದ್ದೆಗಳಿಗೂ ಬಡ್ತಿಯಲ್ಲಿ ಮೀಸಲಾತಿ ಕಲ್ಪಿಸಿ ಆದೇಶ ಹೊರಡಿಸಬೇಕೆಂದು ರಾಜ್ಯ ಸರಕಾರವನ್ನು ಒತ್ತಾಯಿಸಿದರು.

ರಾಜ್ಯದ ಎಲ್ಲ ಶಾಲಾ–ಕಾಲೇಜುಗಳಲ್ಲಿ ಶಿಕ್ಷಕರು ಹಾಗೂ ಉಪನ್ಯಾಸಕರು ಮತ್ತು ಬೋಧಕೇತರ ಅಂಗವಿಕಲ ನೌಕರರ ಸೇವಾವಧಿಯಲ್ಲಿ ಒಂದು ಬಾರಿ ನೀಡುವ ವರ್ಗಾವಣೆ ಪ್ರಕ್ರಿಯೆ ಕೈಬಿಡಬೇಕು. ಇದರ ಬದಲು ಅಂಗವಿಕಲ ನೌಕರರ ಪರಿಸ್ಥಿತಿಗೆ ಅನುಗುಣವಾಗಿ ಆದ್ಯತೆಯ ಮೇರೆಗೆ ಸೇವಾವಧಿಯಲ್ಲಿ ಎಷ್ಟು ಬಾರಿಯಾದರೂ ವರ್ಗಾವಣೆ ಪಡೆಯಲು ಮುಕ್ತ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿ ಅಂಗವೈಕಲ್ಯತೆಯ ಲಾಭ ಪಡೆಯಲು (ವಿಕಲಚೇತನರು) ಅರ್ಹತೆಯುಳ್ಳ ವಿದ್ಯಾವಂತ ನಿರುದ್ಯೋಗಿಗಳಿಗೆ ಸಾಮಾಜಿಕ ನ್ಯಾಯದ ಅನ್ವಯ ಸರಕಾರದ ವಿವಿಧ ಇಲಾಖೆಗಳಲ್ಲಿ ಹಿಂದಿನಿಂದಲೂ ಮೀಸಲಿರಿಸಿ, ಭರ್ತಿ ಮಾಡದೆ ಖಾಲಿ ಉಳಿದಿರುವ ಬ್ಯಾಲಾಗ್ ಹುದ್ದೆಗಳನ್ನು ಸುಪ್ರಿಂಕೋರ್ಟ್ ತೀರ್ಪಿನಂತೆ ನೇರ ನೇಮಕಾತಿಯ ಮೂಲಕ ಭರ್ತಿ ಮಾಡಬೇಕು. ನಿರುದ್ಯೋಗಿ ವಿಕಲಚೇತನರ ಜೀವನ ನಿರ್ವಹಣೆಗಾಗಿ ನೀಡುತ್ತಿರುವ ಮಾಸಿಕ ಜೀವನ ನಿರ್ವಹಣಾ ಭತ್ಯೆ ರೂಪದಲ್ಲಿ ರೂ.5000 ನೀಡಬೇಕು ಎಂದರು.

ಗ್ರಾಮೀಣ ಪುನರ್ವಸತಿ ಯೋಜನೆಯಡಿ ಗೌರವ ಧನ ಆಧಾರದಲ್ಲಿ ಸುಮಾರು 15 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ವಿಶೇಷ ಚೇತನ (ವಿಆಡಬ್ಲ್ಯು/ಎಂ.ಆರ್.ಡಬ್ಲ್ಯು/ಯುಆಡಬ್ಲ್ಯು) ಕಾರ್ಯಕರ್ತರನ್ನು ಕಾಯಂಗೊಳಿಸಬೇಕು. ಒಂದುವೇಳೆ, ಕಾಯಂಗೊಳಿಸುವುದು ಸಾಧ್ಯವಿಲ್ಲ ಎನ್ನುವುದಾದರೆ ಕನಿಷ್ಠ ವೇತನ ಜಾರಿ ಮಾಡಿ ಜೀವನ ಭದ್ರತೆ ನೀಡಬೇಕೆಂದು ಮನವಿ ಮಾಡಿದರು. ಅಂಗವಿಕಲ ವ್ಯಕ್ತಿಗಳ ಅಧಿನಿಯಮ–2016ರ ಅನ್ವಯ ರಾಜ್ಯದ ವಿವಿಧ ಕ್ಷೇತ್ರಗಳಲ್ಲಿ ವಿಕಲಚೇತನರು ಎದುರಿಸುತ್ತಿರುವ ಶೋಷಣೆ ತಪ್ಪಿಸಲು ಸೂಕ್ತ ಕಠಿಣ ಕ್ರಮ ಕೈಗೊಳ್ಳಬೇಕು. ರಾಜ್ಯದಲ್ಲಿ ವಿಕಲಚೇತನರ ಅನುಕೂಲಕ್ಕಾಗಿ ನೀಡುತ್ತಿರುವ ರಿಯಾಯಿತಿ ಬಸ್ ಪಾಸ್ ಈಗಿರುವ 100 ಕಿ.ಮೀ ಬದಲು ರಾಜ್ಯಾದ್ಯಂತ ಪ್ರಯಾಣಿಸಲು ಶಕ್ತಿ ಯೋಜನೆ ಅಡಿ ಉಚಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಬೇಕೆಂದು ಅವರು ಕೋರಿದರು.

ಎಲ್ಲ ಸರಕಾರಿ ಕಚೇರಿಗಳಲ್ಲಿ ವಿಕಲಚೇತನರಿಗೆ ಕೇಂದ್ರ ಸರಕಾರದ ಸುಗಮ್ಯ ಯೋಜನೆಯಡಿ ರ್ಯಾಂಪ್, ಲಿಫ್ಟ್ ಹಾಗೂ ವಿಶೇಷಚೇತನ ಸ್ನೇಹಿ ಶೌಚಾಲಯಗಳನ್ನು ಸುಧಾರಿತ ಆಧುನಿಕ ತಂತ್ರಜ್ಞಾನದ ಮಾನದಂಡಗಳ ಅನ್ವಯ ನಿರ್ಮಿಸಬೇಕು. ಅಂಗವಿಕಲ ವ್ಯಕ್ತಿಗಳ ಅಧಿನಿಯಮ–2016ರ ಅನ್ವಯ ಶೇ.5ರಷ್ಟು ಮೀಸಲಾತಿ ಕಡ್ಡಾಯವಾಗಿ ಒದಗಿಸುವಂತೆ ಎಲ್ಲ ಇಲಾಖೆಗಳಿಗೆ ತಾಕೀತು ಮಾಡಬೇಕು. ಇದೇ ಅಧಿನಿಯಮದ ಅಡಿ ಅಂಗವಿಕಲರ ಅಭಿವೃದ್ಧಿ ನಿಗಮ ಸ್ಥಾಪಿಸಬೇಕು. ಸದರಿ ಅಧಿನಿಯಮದಂತೆ 21 ವಿವಿಧ ಸ್ವರೂಪದ ಅಂಗವೈಕಲ್ಯತೆಯುಳ್ಳ ವ್ಯಕ್ತಿಗಳನ್ನು ಗುರುತಿಸಿ ಸೇರ್ಪಡೆಗೊಳಿಸಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಅಂಗವಿಕಲರ ಸಂಖ್ಯೆ ಹೆಚ್ಚಾಗಿದೆ. ಹಾಗಾಗಿ, ಶೇ.5ರ ಬದಲು ಶೇ.15ಕ್ಕೆ ಮೀಸಲಾತಿ ಪ್ರಮಾಣ ಹೆಚ್ಚಿಸಬೇಕೆಂದು ಅವರು ತಾಕೀತು ಮಾಡಿದರು.ಸಂಘದ ಉಪಾಧ್ಯಕ್ಷ ಗಿರಿಮಲ್ಲ ಕೆ.,ಪ್ರಧಾನಕಾರ್ಯದರ್ಶಿ ಡಾ.ಚಂದ್ರಕಾಂತ ಚಂದಾಪುರ, ಜಂಟಿ ಕಾರ್ಯದರ್ಶಿ ಲಾಲ್ ಮೊಹ್ಮದ್, ಚಿತ್ತಾಪುರ ತಾಲೂಕು ಪ್ರಧಾನ ಕಾರ್ಯದರ್ಶಿ ಸುರೇಶ್ ಕುಲಕರ್ಣಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ತಂಗಿ ತಂಟೆಗೆ ಬರಬೇಡ ಎಂದ ಅಣ್ಣನಿಗೆ ಚಾಕು ಇರಿತ

ಕಲಬುರಗಿ,: ನನ್ನ ತಂಗಿಗೆ ಚುಡಾಯಿಸಬೇಡ, ಆಕೆಯ ತಂಟೆಗೆ ಬರಬೇಡ ಎಂದು ಬುದ್ಧಿವಾದ ಹೇಳಿದ ಅಣ್ಣನಿಗೆ ಯುವಕನೊಬ್ಬ ಚಾಕು ಇರಿದ ಘಟನೆ ಫರಹತಾಬಾದ್ ಪೊಲೀಸ್ ಠಾಣೆ ವ್ಯಾಪ್ತಿಯ ಪಾಣೆಗಾಂವ ಬಸವನ ತಾಂಡಾದಲ್ಲಿ ನಡೆದಿದೆ.

ಅಮರನಾಥ ಚಿನ್ನಾರಾಠೋಡ್ ಎಂಬುವವರಿಗೆ ಪರಶುರಾಮ ನಾರಾಯಣ ರಾಠೋಡ್ ಎಂಬಾತನೆ ಚಾಕು ಇರಿದಿದ್ದು, ಅವರನ್ನು ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದೆ.

ಅಮರನಾಥ ಅವರ ಸಹೋದರಿಯನ್ನು ಪರಶುರಾಮ ಆಗಾಗ ಚುಡಾಯಿಸುತ್ತಿದ್ದ. ಇದರಿಂದ ಸಹೋದರರಾದ ಅಮರನಾಥ ರಾಠೋಡ್ ಮತ್ತು ಶಿವಾಜಿ ರಾಠೋಡ್ ಅವರು ಪರಶುರಾಮಗೆ ನಮ್ಮ ತಂಗಿಯ ತಂಟೆಗೆ ಬರಬೇಡ ಎಂದು ಬುದ್ಧಿವಾದ ಹೇಳಿದ್ದರು.

ಇದರಿಂದ ಕುಪಿತನಾದ ಪರಶುರಾಮ ದೀಪಾವಳಿ ಹಬ್ಬದ ದಿನ ರಾಘವೇಂದ್ರ, ಪ್ರವೀಣ್, ಪ್ರತಾಪ್, ಶೇಖರ್ ಮತ್ತು ರಾಕೇಶ್ ಜೊತೆಗೂಡಿ ಅಮರನಾಥ ಅಮರನಾಥ ಅವರೊಂದಿಗೆ ಜಗಳ ತೆಗೆದು ಅವರ ಹೊಟ್ಟೆಗೆ ಚಾಕುವಿನಿಂದ ಇರಿದು ಗಾಯಗೊಳಿಸಿದಲ್ಲದೆ, ಶಿವಾಜಿ ಚಿನ್ನಾರಾಠೋಡ್ ಮೇಲೆ ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ.

ಈ ಬಗ್ಗೆ ಫರಹತಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ತಾಯಿ ಮೇಲೆ ಮಗ, ಸೊಸೆ ಹಲ್ಲೆ

ತಾಯಿ ಮೇಲೆ ಮಗ ಮತ್ತು ಸೊಸೆ ಹಲ್ಲೆ ನಡೆಸಿ ಜೀವ ಬೆದರಿಕೆ ಹಾಕಿರುವ ಘಟನೆ ಅಶೋಕನಗರ ಪೊಲೀಸ್ ಠಾಣೆ ವ್ಯಾಪ್ತಿಯ ಹೀರಾಪುರದ ದೊಡ್ಡ ವಾಟರ್ ಟ್ಯಾಂಕ್ ಬಳಿಯ ಮಲ್ಲಿಕಾರ್ಜುನ ಗುಡಿ ಹತ್ತಿರ ನಡೆದಿದೆ.

ಮಗ ವಿಜಯಕುಮಾರ ಮತ್ತು ಸೊಸೆ ಹೇಮಾ ಹಲ್ಲೆ ನಡೆಸಿ ಜೀವ ಬೆದರಿಕೆ ಹಾಕಿದ್ದಾರೆ ಎಂದು ಪುತಳಾಬಾಯಿ ನಿಂಗಪ್ಪ ಜೋಗುರು (65) ಅವರು ಅಶೋಕನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ತನಿಖೆ ನಡೆದಿದೆ.

## ಆಟೋ ಚಾಲಕನ ಮೇಲೆ ಹಲ್ಲೆ

ಸುಖಾಸುಮ್ಮನೆ ಹಣ ಕೊಡುವಂತೆ ಪೀಡಿಸಿ ಆಟೋ ಚಾಲಕನ ಮೇಲೆ ಹಲ್ಲೆ ನಡೆಸಿರುವ ಘಟನೆ ಮದಿನಾ ಕಾಲೋನಿಯ ಶಹಾ ಜಿಲಾನಿ ಕ್ರಾಸ್ ಹತ್ತಿರ ನಡೆದಿದೆ.

ಅಬ್ದುಲ್ ರಹಿಮ್ ಎಂಬುವವರ ಮೇಲೆ (39) ತೌಫೀಕ್, ಹೈದರ್ ಮತ್ತು ಶಮ್ಮು ಎಂಬುವವರು ಕೈಯಿಂದ, ಕಟ್ಟಿಗೆ ಮತ್ತು ಕಬ್ಬಿಣದ ರಾಡಿನಿಂದ ಹಲ್ಲೆ ನಡೆಸಿ ಜೀವ ಬೆದರಿಕೆ ಹಾಕಿದ್ದಾರೆ. ಈ ಸಂಬಂಧ ಈ ಮೂವರ ವಿರುದ್ಧ ಆರ್.ಜಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ವಕ್ಫ್ ವಿರುದ್ಧ ಬಿಜೆಪಿ ಪ್ರತಿಭಟನೆ:ಜಮೀರ್ ರಾಜೀನಾಮೆಗೆ ಆಗ್ರಹ

ಕಲಬುರಗಿ : ರಾಜ್ಯ ವಕ್ಫ್ ಮಂಡಳಿಯು ರೈತರ ಜಮೀನುಗಳನ್ನು ವಶಪಡಿಸಿಕೊಳ್ಳುತ್ತಿರುವ ರೈತವಿರೋಧಿ ಧೋರಣೆ ಖಂಡಿಸಿ ಇಂದು ಬಿಜೆಪಿ ರಾಜ್ಯಾದ್ಯಂತ ಪ್ರತಿಭಟನೆ ನಡೆಸುತ್ತಿದ್ದು,ಈ ಹಿನ್ನೆಲೆಯಲ್ಲಿ ಇಂದು ನಗರದಲ್ಲಿ ಭಾರತೀಯ ಜನತಾ ಪಕ್ಷ ಮಹಾನಗರ ಘಟಕದ ವತಿಯಿಂದ ಪ್ರತಿಭಟನೆ ನಡೆಸಲಾಯಿತು.



ವಕ್ಫ್ ಖಾತೆ ಸಚಿವ ಜಮೀರ್ ಅಹಮರನ್ನು ಸಚಿವ ಸ್ಥಾನದಿಂದ ಉಚ್ಚಾಟಿಸಬೇಕು.ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ಜನತೆಯ ಕ್ಷಮೆ ಕೋರಿ ಸ್ಪಷ್ಟನೆ ನೀಡಬೇಕು.ಇನ್ನು ಮುಂದೆ ವಕ್ಫ್ ಅದಾಲತ್ ನಡೆಸದಂತೆ ಸರಕಾರ ಆದೇಶಿಸಬೇಕು.ಇದಕ್ಕೆ ಸಂಬಂಧಿಸಿದಂತೆ ಗೆಜೆಟ್ ಅಧಿಸೂಚನೆ ವಾಪಸ್ಸು ಪಡೆಯಬೇಕು. ಕೇಂದ್ರ ಸರಕಾರವು ತರುತ್ತಿರುವ ವಕ್ಫ್ ತಿದ್ದುಪಡಿ ಕಾಯ್ದೆಗೆ ರಾಜ್ಯ ಸರಕಾರವು ಮುಂದಿನ ಅಧಿವೇಶನದಲ್ಲಿ ಒಮ್ಮತದ ನಿರ್ಣಯ ಅಂಗೀಕರಿಸಿ ಕೇಂದ್ರ ಸರಕಾರಕ್ಕೆ ಕಳಿಸಿ ಕೊಡಬೇಕು ಎಂದು ಮುಖಂಡರು ಆಗ್ರಹಿಸಿ ಜಿಲ್ಲಾಧಿಕರಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಬಿಜೆಪಿ ಮಹಾನಗರ ಜಿಲ್ಲಾಧ್ಯಕ್ಷ ಚಂದು ಪಾಟೀಲ,ಶಾಸಕರಾದ ಶಶೀಲ ನಮೋಶಿ, ಡಾ.ಅವಿನಾಶ ಜಾಧವ, ಮುಖಂಡರಾದ ಗಿರಿರಾಜ ಯಳಮೇಲಿ,ದಯಾನಂದ ಧಾರವಾಡಕರ್, ಅಮರನಾಥ ಪಾಟೀಲ,ಶಿವಾನಂದ ಪಿಸ್ತಿ,ಸಚಿನ್ ಕಡಗಂಚಿ,ಡಾ.ಸುಧಾ ಹಾಲಕಾಯಿ, ದೇವೀಂದ್ರ ದೇಸಾಯಿ ಕಲ್ಲೂರ,ಶ್ರೀನಿವಾಸ ದೇಸಾಯಿ,ನಾಮದೇವ ರಾಠೋಡ,ಶಿವಯೋಗಿ ನಾಗನಹಳ್ಳಿ, ಉಮೇಶ ಪಾಟೀಲ, ರವಿರಾಜ ಕೊರವಿ ,ಮಲ್ಲಿನಾಥ ಜಿನಕೇರಿ ಅವರು ಸೇರಿದಂತೆ ಹಲವರು ಪಾಲ್ಗೊಂಡರು.

## ಮಾರಕಾಸ್ತ್ರದಿಂದ ಕೊಚ್ಚಿ ಯುವಕನ ಕೊಲೆ

ಕಲಬುರಗಿ : ಯಾದಗಿರಿ ಜಿಲ್ಲೆ ,ಶಹಾಪುರ ತಾಲೂಕಿನ ದೋರನಹಳ್ಳಿ ಗ್ರಾಮದ ಎಎಂಡಿ ಕ್ಯಾಂಪಿನ ಬಳಿ ಶಹಾಪುರ ಯಾದಗಿರಿ ಮುಖ್ಯ ರಸ್ತೆಯಲ್ಲಿ ಯುವಕನೊಬ್ಬನನ್ನು ಮಾರಾಕಾಸ್ತ್ರದಿಂದ ಕೊಚ್ಚಿ ಬರ್ಬರವಾಗಿ ಕೊಲೆ ಮಾಡಿರುವ ಘಟನೆ ನಡೆದಿದೆ. ಹಳೆಯ ವೈಷಮ್ಯದ ಹಿನ್ನೆಲೆ ಕೊಲೆ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಜಾಪಾನಾಯಕ ತಾಂಡಾದ ತಿಪ್ಪಣ್ಣ (35) ಕೊಲೆಯಾದ ವ್ಯಕ್ತಿ. ಬೈಕ್ ಮೇಲೆ ಹೋಗುತ್ತಿರುವಾಗಲೇ ಮಚ್ಚಿನಿಂದ ತಲೆ, ಕುತ್ತಿಗೆಗೆ ಬಲವಾಗಿ ಹೊಡೆಯಲಾಗಿದೆ. ಸ್ಥಳಕ್ಕೆ ಎಸ್ಪಿ ಸಂಗೀತಾ, ಹೆಚ್ಚುವರಿ ಎಸ್ಪಿ ಧರಣೀಶ, ಡಿವೈಎಸ್ಪಿ ಜಾವೀದ್ ಇನಾಂ ದಾರ್, ಸಿಬ್ಬಂದಿ ಭೇಟಿ ನೀಡಿ ಪರಿಶೀಲಿಸಿದರು.

# ಟ್ಯಾಂಕರ್ ಡಿಕ್ಕಿ: ವೃದ್ಧೆ ಸಾವು

ಕಲಬುರಗಿ: ರಸ್ತೆಯ ಡಿವೈಡರ್ ಬಳಿ ನಿಂತಿದ್ದ ವೃದ್ಧೆಗೆ ಡೀಸೆಲ್ ಟ್ಯಾಂಕರ್ ಡಿಕ್ಕಿ ಹೊಡೆದ ಪರಿಣಾಮ ಆಕೆ ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ನಗರದ ಬಸವೇಶ್ವರ ಆಸ್ಪತ್ರೆ ಸಮೀಪದ ಖರ್ಗೆ ಪೆಟ್ರೋಲ್ ಬಂಕ್ ಸಿಗ್ನಲ್ ಬಳಿ ಸಂಭವಿಸಿದೆ.ನಗರದ ಕುಷ್ಠ ರೋಗಿಗಳ ಕಾಲೋನಿಯ ಮಲ್ಲಮ್ಮ ಸಾಯಬಣ್ಣ (65) ಮೃತಪಟ್ಟ ಮಹಿಳೆ. ರಸ್ತೆ ದಾಟಲು ಡಿವೈಡರ್ ಬಳಿ ನಿಂತಿದ್ದಾಗ ಡೀಸೆಲ್ ಟ್ಯಾಂಕರ್ ಆಕೆಗೆ ಡಿಕ್ಕಿ ಹೊಡೆದಿದ್ದರಿಂದ ಲಾರಿ ಅಡಿ ಸಿಲುಕಿ ಆಕೆಯ ಎಡಗಾಲಿನ ತೊಡೆ ಸಂಪೂರ್ಣ ನಜ್ಜುಗುಜ್ಜಾಗಿದೆ. ಹೀಗಾಗಿ, ತೀವ್ರ ರಕ್ತಸ್ರಾವದಿಂದಾಗಿ ಆಕೆ ಸಾವನ್ನಪ್ಪಿದ್ದಾರೆ. ಕಲಬುರಗಿ ಸಂಚಾರಿ ಠಾಣೆ–2 ರಲ್ಲಿ ಪ್ರಕರಣ ದಾಖಲಾಗಿದೆ.

# ಪುಸ್ತಕ ಜ್ಞಾನದಾಹವನ್ನು ತಣಿಸುವ ಸಾಧನ: ಶಿವರಾಜ ಪಾಟೀಲ

ಕಲಬುರಗಿ: ಪುಸ್ತಕ ಓದುವುದು ಕೆಲವರಿಗೆ ಹವ್ಯಾಸವಾದರೆ ಮತ್ತೆ ಕೆಲವರಿಗೆ ಜ್ಞಾನ ವೃದ್ಧಿಗಿರುವ ದಾರಿ. ಪ್ರತಿಯೊಬ್ಬ ಓದುಗನ ಅಭಿರುಚಿ ಭಿನ್ನವಾಗಿರಬಹುದು. ಆದರೆ ಆ ಓದು ಆತನ ಜ್ಞಾನದಾಹವನ್ನು ತಣಿಸುತ್ತದೆ ಎಂದು ಸಲಹಾ ಸಮಿತಿ ಹಿರಿಯ ಸದಸ್ಯರಾದ ಪ್ರೊ.ಶಿವರಾಜ ಪಾಟೀಲ ಅಭಿಪ್ರಾಯಪಟ್ಟರು.

ಸಿದ್ದಲಿಂಗೇಶ್ವರ ಪ್ರಕಾಶನದ ಬುಕ್ ಮಾಲ್ ಎದುರುಗಡೆ ಕರ್ನಾಟಕ ರಾಜ್ಯೋತ್ಸವ ಸುವರ್ಣ ಮಹೋತ್ಸವ ಸಂಭ್ರಮದ ಸವಿ ನೆನಪಿಗಾಗಿ 15 ದಿವಸ ಹಮ್ಮಿಕೊಂಡ ಪುಸ್ತಕ ಪ್ರದರ್ಶನ ಮತ್ತು ಮಾರಾಟವನ್ನು ಉದ್ಘಾಟಿಸಿ ಮಾತನಾಡಿ ಓದುವುದರಿಂದ ನಮ್ಮ ಕಲ್ಪನಾ ಶಕ್ತಿ ಹೆಚ್ಚುವುದರ ಜತೆಯಲ್ಲಿ ಮನೋವಿಕಾಸಕ್ಕೆ ನೆರವಾಗುತ್ತದೆ. ಒಂದೊಂದು ಪುಸ್ತಕವು ತನ್ನದೇ ಆದ ವೈವಿಧ್ಯಮಯ ಕಥಾ ಮತ್ತು ಜ್ಞಾನ ಹಂದರವನ್ನು ಒಳಗೊಂಡಿದ್ದು, ಬೇರೆ ಬೇರೆ ಪ್ರಪಂಚದ ಅರಿವು ಮೂಡಿ ಸುತ್ತದೆ. ಒಟ್ಟಿನಲ್ಲಿ ಪುಸ್ತಕಗಳು ಕೇವಲ ಜ್ಞಾನದ ಗುಚ್ಚವಾಗಿರದೆ ಒಂದು ಪ್ರದೇಶದ ಭಾಷೆ, ಸಂಸ್ಕೃತಿ ಇವೆಲ್ಲವನ್ನು ಬೆಸೆಯುವ ಕೊಂಡಿಗಳಾಗಿರುತ್ತವೆ ಎಂದರು.



ಸಿದ್ದಲಿಂಗೇಶ್ವರ ಬುಕ್ ಮಾಲ್ ಎದುರುಗಡೆ ಕರ್ನಾಟಕ ರಾಜ್ಯೋತ್ಸವದ ಸುವರ್ಣ ಸಂಭ್ರಮದ ಪ್ರಯುಕ್ತ ನಮ್ಮ ಪ್ರಕಾಶನದಿಂದ ಪ್ರಕಟಗೊಂಡ ಸಾಹಿತ್ಯಕ್ಕೆ ಸಂಬಂಧಿಸಿದಂತೆ ಕಥೆ, ಕವನ, ನಾಟಕ, ಪ್ರಬಂಧ, ವಿಮರ್ಶೆ,ಕೃತಿಗಳಿಗೆ 50% ಪ್ರತಿಶತ ಮತ್ತು ಪಠ್ಯ ಹಾಗೂ ಸ್ಪರ್ಧಾತ್ಮಕ,ಪುಸ್ತಕಗಳಿಗೆ 20% ಪ್ರತಿಶತ 15 ದಿನಗಳ ಕಾಲ ರಿಯಾಯಿತಿ ದರದಲ್ಲಿ ಮರಾಟಕ್ಕೆ ಲಭ್ಯವಿದ್ದು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಪ್ರಕಾಶನ ಸಂಸ್ಥೆಯ ಪ್ರಕಾಶಕರಾದ ಬಸವರಾಜ ಕೊನೇಕ್ ಅವರು ವಿನಂತಿಸಿಕೊಂಡರು. ಇದೇ ಸಂದರ್ಭದಲ್ಲಿ ಸಿದ್ದಲಿಂಗೇಶ್ವರ ಪ್ರಕಾಶನ ಸಲಹಾ ಸಮಿತಿ ಸದಸ್ಯರಾದ ಪ್ರೊ.ಶಿವರಾಜ ಪಾಟೀಲ,ಡಾ. ಜಯದೇವಿ ಗಾಯಕವಾಡ, ಡಾ. ಚಿ.ಸಿ. ನಿಂಗಣ್ಣ, ಡಾ. ಕಾವ್ಯಶ್ರೀ ಮಹಾಗಾಂವಕರ್, ಡಾ. ಶರಣಬಸಪ್ಪ ವಡ್ಡನಕೇರಿ,ಪ್ರಕಾಶಕರಾದ ಸಿದ್ದಲಿಂಗ ಕೊನೇಕ್,ಶರಣು ಕೊನೇಕ್, ಸೇರಿದಂತೆ ಡಾ. ಕಲ್ಯಾಣರಾವ ಪಾಟೀಲ, ಡಾ.ಶೀಲಾದೇವಿ ಬಿರಾದಾರ್ ಮೊದಲಾದವರು ಉಪಸ್ಥಿತರಿದ್ದರು.

# ನಾಲ್ಕು ಹಾವುಗಳ ರಕ್ಷಣೆ

ಕಲಬುರಗಿ: ಹಾವಾಡಿಗನೊಬ್ಬ ಹಾವುಗಳನ್ನು ಹಿಡಿದು ತಂದು ನಗರದ ಸೂಪರ್ ಮಾರ್ಕೆಟ್‌ನಲ್ಲಿ ಹಾವು ಆಡಿಸುವುದರ ಮೂಲಕ ಜನರ ಮನ ರಂಜಿಸುತ್ತಿದ್ದಾನೆ ಎಂಬ ದೂರಿನ ಮೇಲೆ ಅರಣ್ಯಾಧಿಕಾರಿಗಳು ಸ್ಥಳಕ್ಕೆ ತೆರಳಿ ನಾಲ್ಕು ಹಾವುಗಳನ್ನು ರಕ್ಷಣೆ ಮಾಡಿದ್ದಾರೆ.

ಯಾದಗಿರಿ ಮೂಲದ ಹಾವಾಡಿಗನಿಂದ ಒಂದು ಹೆಬ್ಬಾವು, 2 ಇಂಡಿಯನ್ ಕೋಬ್ರಾ ಮತ್ತು ಒಂದು ಹೆಬ್ಬಾವು ವಶ ಪಡಿಸಿಕೊಂಡು ಅವುಗಳನ್ನು ಅರಣ್ಯ ಪ್ರದೇಶದಲ್ಲಿ ಅವುಗಳನ್ನು ಬಿಡಲಾಗಿದೆ.ಯಾದಗಿರಿ ಮೂಲದ ಹಾವಾಡಿಗ ನಾಲ್ಕು ಹಾವುಗಳನ್ನು ಹಿಡಿದು ತಂದು ಅವುಗಳನ್ನು ಆಡಿಸುವುದರ ಮೂಲಕ ಜನರ ಮನ ರಂಜಿಸಿ ಹಣ ಮಾಡುತ್ತಿದ್ದಾನೆ ಎಂದು ಸಾರ್ವಜನಿಕರು ನೀಡಿದ ದೂರಿನ ಮೇರೆಗೆ ವಲಯ ಅರಣ್ಯಾಧಿಕಾರಿ ಸಂಜೀವಕುಮಾರ ಚವ್ಹಾಣ್ ಅವರ ಸೂಚನೆಯಂತೆ ಉಪ ವಲಯ ಅರಣ್ಯಾಧಿಕಾರಿ ರಮೇಶ ಹಾಳಕೇರಿ ಅವರು ಸ್ಥಳಕ್ಕೆ ತೆರಳಿ 4 ಹಾವುಗಳನ್ನು ರಕ್ಷಣೆ ಮಾಡಿ ಅವುಗಳನ್ನು ಅರಣ್ಯ ಪ್ರದೇಶದಲ್ಲಿ ಬಿಟ್ಟಿದ್ದಾರೆ.

# ಭೀಷ್ಮ ಕೆರೆಗೆ ಬಾಗಿನ ಅರ್ಪಣೆ

ಗದಗ.ನ.4: ಭಿಷ್ಮ ಕೆರೆಯಿಂದ ನಗರದ ಸೌಂದರ್ಯ ಜೊತೆಗೆ ನಗರದ ಅಂತರ್ಜಲ ಹೆಚ್ಚಾಗಿ ಜನರಿಗೆ ನೆಮ್ಮದಿಯನ್ನು ತಂದಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರು ಹೇಳಿದರು. ನಗರದ ಭಿಷ್ಮ ಕೆರೆಯ ದಂಡೆಯ ಮೇಲೆ ಜಿಲ್ಲಾಡಳಿತ, ನಗರ ಸಭೆ ಸಂಯುಕ್ತ ಆಶ್ರಯದಲ್ಲಿ ರವಿವಾರ ಏರ್ಪಡಿಸಿದ ಭಿಷ್ಮ ಕೆರೆಯ ಗಂಗಾ ಪೂಜೆ ಹಾಗೂ ಬಾಗಿನ ಅರ್ಪಿಸಿ ಅವರು ಮಾತನಾಡಿದರು. ತೋಂಟದಾರ್ಯ ಮಠದ ಸಿದ್ಧರಾಮ ಸ್ವಾಮಿಜಿಗಳು ಸಾನಿಧ್ಯ ವಹಿಸಿ ಮಾತನಾಡಿ, ನೀರು ಮನುಷ್ಯನಿಗೆ ಅತ್ಯಂತ ಮುಖ್ಯವಾಗಿರುವಂತದ್ದು,



ಪಂಚಭೂತಗಳಾದ ಅಗ್ನಿ, ಭೂಮಿ, ವಾಯು, ಆಕಾಶ, ನೀರಿನಿಂದ ಮಾನವ ಶರೀರ ನಿರ್ಮಿತವಾಗಿದ್ದನ್ನು ನಮ್ಮ ಹಿರಿಯರು ಗಮನಿಸಿ ಪಂಚಭೂತಗಳಿಗೆ ಪ್ರಾರಭದಿಂದಲೂ ಗೌರವವನ್ನು ನೀಡಿದ್ದಾರೆ. ನೀರು ಅತ್ಯಂತ ಪವಿತ್ರವಾದದ್ದು, ಭೀಷ್ಮ ಕೆರೆಯು ಗದಗ ನಗರದ ಜನರ ನೀರಿನ ದಾಹವನ್ನು ತಣಿಸಿರುವಂತ ಜೀವನಾಡಿಯಾಗಿದೆ ಎಂದರು. ದೂರದ ತುಂಗಭಂದ್ರ ನದಿಯಿಂದ ಭಿಷ್ಮ ಕೆರೆಗೆ ನೀರನ್ನು ತಂದು ಮಹತ್ವಪೂರ್ಣ ಸಾಧನೆ ಮಾಡಿ ಈ ಪ್ರದೇಶದ ಜನರಿಗೆ ಅನುಕೂಲ ಮಾಡಿರುವ ಸಚಿವ ಎಚ್. ಕೆ. ಪಾಟೀಲ ಅವರು ಅಭಿನವ ಭಗೀರಥ ಎಂದರು. ಭಿಷ್ಮ ಕೆರೆಯಿಂದ ಅಂತರ್ಜಲ ಸಮೃದ್ಧಿ ಆಗುವುದರ ಜೊತೆಗೆ ಈ ಪ್ರದೇಶವನ್ನು ಪ್ರವಾಸಿ ತಾಣವನ್ನಾಗಿಸಿದ್ದು ವಿಶೇಷ, ಭಿಷ್ಮ ಕೆರೆಗೆ ಪ್ರತಿ ದಿನಾಲೂ ನೂರಾರು ಪ್ರವಾಸಿಗರು ಆಗಮಿಸುತ್ತಿದ್ದಾರೆ. ಭವ್ಯ ಬಸವೇಶ್ವರ ಮೂರ್ತಿ ನೋಡಿ ಕಣ್ಣತುಂಬಿಕೊಂಡು, ಭಿಷ್ಮ ಕೆರೆಯಲ್ಲಿರು ಬೋಟಿಂಗ್ ಮೂಲಕ ಜಲವಿಹಾರ ಮಾಡಿ ಆಂದಸಿಸುತ್ತಿದ್ದಾರೆ ಎಂದು ಹೇಳಿದರು.. ಕಾರ್ಯಕ್ರಮದಲ್ಲಿ ವಿವಿಧ ಧರ್ಮದ ಗುರುಗಳು, ವಿಧಾನ ಪರಿಷತ್ ಸದಸ್ಯ ಎಸ್ ವಿ ಸಂಕನೂರ,ಕೆಡಿಪಿ ಸದಸ್ಯ ಡಿ ಆರ್ ಪಾಟೀಲ,ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಬಿ.ಬಿ.ಅಸೂಟಿ, ತಾಲ್ಲೂಕ ಅಧ್ಯಕ್ಷ ಅಶೋಕ ಮಂದಾಲಿ, ಎಸ್ ಎನ್ ಬಳ್ಳಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್ ನೇಮಗೌಡ ಸೇರಿದಂತೆ ಹಲವರು ಹಾಜರಿದ್ದರು. ಗದಗ ಬೆಟಗೇರಿ ನಗರಸಭೆ ಪೌರಾಯುಕ್ತ ಮಹೇಶ ಪೊತದಾರ ಕಾರ್ಯಕ್ರಮ ನಿರ್ವಹಿಸಿದರು.

# ಇದು ಯುಟರ್ನ್ ಸರ್ಕಾರ



**ಹುಬ್ಬಳ್ಳಿ:** ಕಾಂಗ್ರೆಸ್ ಸರ್ಕಾರದ ವಿರುದ್ಧ ರಾಜ್ಯಾದ್ಯಂತ ಜನರು ತಿರುಗಿ ಬಿದ್ದಿದ್ದಾರೆ. ಈ ಅಲೆಗೆ ಮೂರು ಉಪಚುನಾವಣೆಯಲ್ಲಿ ಕಾಂಗ್ರೆಸ್ ಕೊಚ್ಚಿ ಹೋಗುವುದು ಗ್ಯಾರಂಟಿ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ರೈತರಿಗೆ ವಕ್ಫ್ ಆಸ್ತಿ ಹೆಸರಿನಲ್ಲಿ ನೊಟೀಸ್ ಕೊಟ್ಟಿರುವುದಕ್ಕೆ ರಾಜ್ಯಾದ್ಯಂತ ಜನರು ಸರ್ಕಾರದ ವಿರುದ್ಧ ಆಕ್ರೋಶಗೊಂಡಿದ್ದಾರೆ. ಮುಖ್ಯಮಂತ್ರಿಗಳಿಗೆ ತಮ್ಮ ತಪ್ಪಿನ ಅರಿವಾಗಿ ನೊಟೀಸ್ ವಾಪಸ್ ತೆಗೆದುಕೊಳ್ಳಲು ಹೇಳಿದ್ದಾರೆ. ಸರ್ಕಾರ ತಪ್ಪು ಮಾಡದಿದ್ದರೆ ರೈತರಿಗೆ ನೀಡಿದ್ದ ನೋಟಿಸ್ ಯಾಕೆ ವಾಪಸ್ ಪಡೆಯುತ್ತಿದ್ದರು? ಎಂದು ಪ್ರಶ್ನಿಸಿದರು.

ವಕ್ಫ್ ಸಚಿವ ಜಮೀರ್ ಅವರು ಮುಖ್ಯಮಂತ್ರಿಗಳ ಆದೇಶದ ಮೇರೆಗೆ ನೊಟೀಸ್ ನೀಡಲಾಗಿದೆ ಎಂದು ಹೇಳಿದ್ದಾರೆ. ಡಿಸಿಗಳು ಸಚಿವರ ಆದೇಶದ ಮೇರೆಗೆ ನೊಟೀಸ್ ನೀಡಿರುವುದಾಗಿ ಹೇಳಿದ್ದಾರೆ. ಈಗ ಜನ ತಿರುಗಿ ಬೀಳುತ್ತಾರೆ ಎನ್ನುವುದು ಗೊತ್ತಾದ ತಕ್ಷಣ ಯು ಟರ್ನ್ ಹೊಡೆಯುತ್ತಿದ್ದಾರೆ ಎಂದರು.

ಇದೊಂದು ರೀತಿ ಯುಟರ್ನ್ ಸರ್ಕಾರ. ಮುಡಾದಲ್ಲಿ ಸೈಟ್ ಪಡೆದು ವಾಪಸ್ ಕೊಡುತ್ತಾರೆ. ವಾಲ್ಮೀಕಿ ನಿಗಮದ ಹಣ ಲೂಟಿ ಮಾಡಿ ಅದನ್ನು ವಾಪಸ್ ಹಾಕುವುದಾಗಿ ಹೇಳುತ್ತಾರೆ. ಈಗ ವಕ್ಫ್ ವಿಚಾರದಲ್ಲಿ ರೈತರಿಗೆ ನೋಟಿಸ್ ನೀಡಿ, ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ನೋಟಿಸ್ ವಾಪಸ್ ಪಡೆಯುತ್ತಾರೆ, ರಾಜ್ಯ ಸರ್ಕಾರ ನಿರಂತರ ಇದೇ ರೀತಿ ಮಾಡುತ್ತ ಬಂದಿದೆ ಎಂದು ಅವರು ವಾಗ್ದಾಳಿ ನಡೆಸಿದರು.

# ಕ್ರಿಮಿನಾಶಕ ಸೇವಿಸಿ ವ್ಯಕ್ತಿ ಆತ್ಮಹತ್ಯೆ

ಕಲಬುರಗಿ: ಜೀವನದಲ್ಲಿ ಜಿಗುಪ್ಸೆಗೊಂಡು ಕ್ರಿಮಿನಾಶಕ ಸೇವಿಸಿ ವ್ಯಕ್ತಿಯೊಬ್ಬ ಆತ್ಮಹತ್ಯೆ ಮಾಡಿಕೊಂಡಿರುವ ಸಬ್–ಅರ್ಬನ್ ಪೊಲೀಸ್ ಠಾಣೆ ವ್ಯಾಪ್ತಿಯ ಬನ್ನೂರ ಗ್ರಾಮದಲ್ಲಿ ನಡೆದಿದೆ.

ಹಣಮಂತ ತಂದೆ ಪೀರಪ್ಪ ಹಳಿಮನಿ ಆತ್ಮಹತ್ಯೆ ಮಾಡಿಕಂಡವರು.

ನ. 2 ರಂದು ಜಮೀನಿನಲ್ಲಿ ಕ್ರಿಮಿನಾಶಕ ಸೇವಿಸಿ ಅಸ್ವಸ್ಥರಾಗಿದ್ದ ಅವರನ್ನು ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ನ.3 ರಂದು ಬೆಳಗಿನಜಾವ ಮೃತಪಟ್ಟಿದ್ದಾರೆ. ಮೃತರಿಗೆ ಇಬ್ಬರು ಹೆಣ್ಣು ಮತ್ತು ಇಬ್ಬರು ಗಂಡು ಮಕ್ಕಳಿದ್ದಾರೆ. ಈ ಸಂಬಂಧ ಅವರ ಪತ್ನಿ ನಾಗಮ್ಮ ಹಳಿಮನಿ ಅವರು ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

ಗಾಂಜಾ ಸೇವನೆ: ಪ್ರಕರಣ ದಾಖಲು ನಗರದ ರಾಣೇಸ್ಪೀರ್ ದರ್ಗಾ ಹತ್ತಿರ ಗಾಂಜಾ ಸೇವನೆ ಮಾಡುತ್ತಿದ್ದ ರಾಣೆಸ್ಪೀರ್ ದರ್ಗಾ ರಸ್ತೆಯ ಆಶ್ರಯ ಕಾಲೋನಿಯ ಸೈಯದ್ ನುರೋದ್ದಿನ್ (54) ಎಂಬಾತನನ್ನು ಸಬ್–ಅರ್ಬನ್ ಪೊಲೀಸರು ವಶಕ್ಕೆ ತೆಗೆದುಕೊಂಡು ಆತನ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ಏಕ್ ಪೆಡ್ ಮಾ ಕೇ ನಾಮ್ ಕಾರ್ಯಕ್ರಮ

ಕಾಳಗಿ : ತಾಲೂಕಿನ ಕಮಕನೂರ ಗ್ರಾಮದಲ್ಲಿ ನೆಹರೂ ಯುವ ಕೇಂದ್ರ ಕಲಬುರಗಿ ಹಾಗೂ 7ಸ್ಟಾರ್ ಅಡ್ವೆಂಚರ್ ಸ್ಪೋರ್ಟ್ಸ್ ಅಸೋಸಿಯೇಶನ್ ವತಿಯಿಂದ ಏಕ್ ಪೆಡ್ ಮಾ ಕೇ ನಾಮ್ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಮಾಜಿ ಗ್ರಾಂ ಪಂಚಾಯತ್ ಉಪಾಧ್ಯಕ್ಷರಾದ ಕಾಶಿನಾಥ್ ಬಂಡಿ, ಮುಖಂಡರಾದ ಅಂಬರೀಶ್ ಶ್ಯಾಮಸುಂದರ, ವೀರೇಶ ಬಂಡಿ, ಚಂದ್ರಕಾಂತ ಕಾಳಗಿ, ದೇವರಾಜ ಕನ್ನಡಗಿ, ಶೀಲಾ ಬಂಡಿ, ಮಮತಾ ಹೋಳ್ಕರ್, ಶ್ರೀಶೈಲ ಹೊಸಮನಿ, ಗಣಪತಿ ಜಮಾದಾರ್, ಇಂದಪ್ಪ ಎಂಟಮಾನ, ಭೀಮರಾಯ ಹೋಳ್ಕರ್ ಸೇರಿದಂತೆ ಗ್ರಾಮಸ್ಥರು ಇದ್ದರು.



### ಗುರು-ಶಿಷ್ಯ ಪರಂಪರೆಯ ಬೆಸುಗೆ। ಮತ್ತಿಷ್ಟು ನವತನದ ಚೈತನ್ಯ। ದೃಶ್ಯಕಾವ್ಯ ಪುಷ್ಟಿಕರವಾಗಿ ಸೃಷ್ಟಿಸಿದ ಕಾಣಿಕೆ

# ಹಳೆಯ ಶಿಷ್ಯರಿಂದ ಗುರುವಿಗೆ ಪಟವರ್ಧನ ಅರಮನೆ ಕಾಣಿಕೆ!

ಉದಯರಶ್ಮಿ ದಿನಪತ್ರಿಕೆ
ವರದಿ: ಗುಲಾಬಚಂದ ಆರ್.ಜಾಧವ

ಚಿಕ್ಕಪಡಸಲಗಿ: ಅಕ್ಷರ ಕಲಿಸಿದ ಗುರುವಿಗೆ ಶಿಷ್ಯ ಬಳಗದ ಸಮೂಹ ಅರಮನೆಯೊಂದನ್ನು ಕಾಣಿಕೆ ರೂಪದಲ್ಲಿ ಕೊಡುಗೆಯಾಗಿ ನೀಡಿ ಔದಾರ್ಯತೆ ಮೆರೆದಿದೆ. ಅದು ಅಂ-ತಿಂಥಹ ಕಾಣಿಕೆ ಅಲ್ಲ! ಮಹಾರಾಜರ ನಾಮಾಂಕಿತದಲ್ಲಿರುವ ಭವ್ಯ ಅರಮನೆ ಕೊಡುಗೆ ಎಂಬುದು ಗಮನಾರ್ಹ !

ಹೌದು! ಈ ಐತಿಹ್ಯಯುಳ್ಳ ಅರಮನೆಯನ್ನೇ ತಮ್ಮ ಮೆಚ್ಚಿನ ಗುರುವಿಗೆ ಕಾಣಿಕೆಯಾಗಿ ನೀಡಿದವರು ಹಳೆಯ ವಿದ್ಯಾರ್ಥಿಗಳು ಎಂಬುದು ಇಲ್ಲಿ ಸತ್ಯ! ಯಾಮಾರಿಸುವ ಕಾಲಘಟ್ಟದ ಈ ನವರಂಗಿನ ದುನಿಯಾದಲ್ಲಿ ಅರಮನೆ ಕಾಣಿಕೆ ನೀಡುವರು ಉಂಟೇ? ನಂಬಲೇ ಬೇಕು ! ಗುರು-ಶಿಷ್ಯರ ಪರಂಪರೆಯ ಬೆಸುಗೆಯಲ್ಲಿ ಈ ಪ್ರೀತಿಯ ಅರಮನೆ ಕಾಣಿಕೆ ರೂಪದಲ್ಲಿ ಮೈದೇಳಿದೆ! ಶಹಜಾನ್ ಸವಿನೆನಪಿಗಾಗಿ ತಾಜಮಹಲ್ ಕಟ್ಟಿಸಿದವರ ಸ್ಪೂತಿ9ಯದುರಿಗಿರುವಾಗ ನಾಲ್ಕಕ್ಷರ ಕಲಿಸಿದ ಗುರುವಿಗೆ ಅರಮನೆಯನ್ನೇ ಕೊಡುಗೆಯಾಗಿ ನೀಡಿದ್ದಾರೆ ಎಂಬುದರಲ್ಲಿ ಅಚ್ಚರಿಯೆನ್ನಿಲ್ಲ! ಪ್ರೀತಿ ಮಾಯೆ- ಅಭಿಮಾನ ಛಾಯೆ ಉಮ್ಮಳಿಸಿದೆ ಇಲ್ಲಿ!

ಸಹೃದಯತೆಯ ಪರಮ ಪವಿತ್ರ "ಗುರು-ಶಿಷ್ಯ" ಪರಂಪರೆಯ ಬಾಂಧವ್ಯಕ್ಕೆ ಮತ್ತಿಷ್ಟು ನವತನದ ಚೈತನ್ಯ ಇಲ್ಲಿನ ಅರಮನೆ ಕಾಣಿಕೆ ದೃಶ್ಯಕಾವ್ಯ ಪುಷ್ಟಿಕರವಾಗಿ ಸೃಷ್ಟಿಸಿದೆ. ಮನೋಜ್ಞವಾಗಿ ಮಿನುಗಿದೆ!

ಹಳೆ ಶಿಷ್ಯರ ಈ ವೈಶಿಷ್ಟ್ಯಪೂರ್ಣ ಕಾಯಕ ಗಮನ ಸೆಳೆದಿದೆ. ಅವರ ಸಂಸ್ಕಾರಯುತ ಒಳಿತು ಭಾವ ಸಂಪ್ರೀತಿಗೆ ಇಂದಿನ ಆಧುನಿಕ ಕಾಲದಲ್ಲಿ ಪಾತ್ರರಾಗಿರುವ ಗುರು ನಿಜಕ್ಕೂ ಧನ್ಯರು! ಚಿಕ್ಕಪಡಸಲಗಿ ಶಿವಶರಣ ಹರಳಯ್ಯ ಸ್ಮಾರಕ ಪ್ರೌಢಶಾಲೆಯಲ್ಲಿ ಜನಮೆಚ್ಚುಗೆ ಪಡೆದು ವಿಶ್ರಾಂತ ಜೀವನೋತ್ಸಾಹ ಅನುಭವಿಸುತ್ತಿರುವ ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕ ಬಸವರಾಜ ಅನಂತಪೂರ ಅವರೇ ಹಳೆ ಶಿಷ್ಯರ ಕಲಿಕಾ ಪಯಣದ ಹೃದಯ ಸಾಮ್ರಾಜ್ಯವನ್ನಾಳಿರುವ ಪ್ರೀತಿ,ಪೂಜ್ಯಭಾವದ ಗುರುವಾಗಿದ್ದಾರೆ! ಅದಕ್ಕಾಗಿ ಅವರಿಗೆ ಅರಮನೆ ಕಾಣಿಕೆ ಪ್ರಾಪ್ತಿ! ಓರಿಜನಲ್-ಡುಪ್ಲಿಕೇಟ್ ಆ ಮಾತು ಬೇರೆ! ನೈಜ-ಕೃತಕ ವಿಚಾರ ಬಿಡಿ! ಮೊದಲು ಕೊಡುವ ಉದಾರತೆಯ ಭಾವ ನೋಡಬೇಷ್ಟೇ! ಅಲ್ಲವೇ ?

ಅನಂತಪೂರ ಅವರ ಅನಂತಮಯ ಶೈಕ್ಷಣಿಕ ರಂಗದ ಕಾಯಕಕ್ಕೆ ಶಿಷ್ಯರಿಂದ ಸಂದ ಗೌರವಾಧಾರದ ದ್ಯೋತಕ ರಮ್ಯತೆ, ನಮ್ಯತೆಯ "ಅರಮನೆ ಪ್ರೇಮದ ಕಾಣಿಕೆ" ಇದಾಗಿದೆ.

ಶಿಕ್ಷಕ ವೃತ್ತಿಯ ಅಮೂಲ್ಯತೆ ಪರಿಪಾಲಿಸಿ ಅಸಂಖ್ಯಾತ ಮಕ್ಕಳ ಮನಸ್ಸನ್ನು ಗೆದ್ದಿರುವ ಬಸವರಾಜ ಅನಂತಪೂರ ಕಳೆದ ಕೆಲ ತಿಂಗಳ ಹಿಂದಷ್ಟೇ ವಯೋನಿವೃತ್ತರಾಗಿದ್ದಾರೆ. ಆ ಪ್ರಯುಕ್ತ ಎಸ್ಸೆಸ್ಸೆಲ್ಸಿ 2013-14 ನೇ ಸಾಲಿನ ಹಳೆ ಶಿಷ್ಯರ ಬಳಗ ಸೇರಿಕೊಂಡು ತಮ್ಮ ನೆಚ್ಚಿನ ಗುರುವಿನ ಜಮಖಂಡಿಯಲ್ಲಿರುವ ನಿವಾಸಕ್ಕೆ ತೆರಳಿ ಭಾರತೀಯ ಸಂಸ್ಕೃತಿಯ ಆದರಾತಿಥ್ಯದೊಂದಿಗೆ ಹೃದಯಸ್ಪರ್ಶಿ ಸನ್ಮಾನಿಸಿ ಗೌರವಾರ್ಪಣೆ ಗೈದು ಗುರು ಪ್ರೀತಿ, ವಿಶ್ವಾಸಾರ್ಹ ಕೊಂಡಿ ಗಟ್ಟಿಗೊಳಿಸಿದ್ದಾರೆ. "ಗುರು-ಶಿಷ್ಯರ" ಪವಿತ್ರ ಸನ್ನಡತೆಗೆ ಸಾಕ್ಷಿಯಾಗಿದ್ದಾರೆ. ಅಪರೂಪ, ಆದರ್ಶತನದ ಈ ಮಾದರಿ ನಡೆಯೊಂದಿಗೆ ಧನ್ಯತಾಭಾವದ ಪರವಶತೆಯಲ್ಲಿ "ಸಾಕ್ಷರತೆಯ ಸಮಥ-ಀಕರು" ಎಂಬ ಅಕ್ಷರ ಕಲಿಕಾ ಜ್ಞಾನದ ಸಿದ್ಧಿಯ ಸಮ್ಮತಿಯನ್ನು ಸಮರ್ಥನೀಯವಾಗಿಸಿದ್ದಾರೆ ಈ ಹಳೆ ವಿದ್ಯಾರ್ಥಿಗಳು !



ಈ ಹಳೆ ಶಿಷ್ಯರು ಅನಂತಪೂರ ಗುರುವಿಗೆ ಹಾಗೂ ಅವರ ಧರ್ಮಪತ್ನಿ ಶ್ರೀಮತಿ ಲಕ್ಷ್ಮೀ ಅನಂತಪೂರ ದಂಪತಿಗಳಿಗೆ ಶಾಲು ಹೊದಿಸಿ ಸನ್ಮಾನಿಸಿ ಬಿನ್ನವತ್ತಳೆ ನೀಡಿ ಗೌರವಿಸಿದರು "ಓಲ್ಡ್ ಈಸ್ ಗೋಲ್ಡ್- ಗುರು,ಶಿಷ್ಯರ" ಸಂಸ್ಕೃತಿ, ಪರಂಪರೆ ನವ್ಯೋತ್ತರವಾಗಿ ಪ್ರತಿಬಿಂಬಿಸಿ ನಮ್ರತೆಯಿಂದ ನಮಿಸಿ ನಗೆಭಾವದ ಮಿಂಚಿನಲ್ಲಿ ಸಂತಸ ಹಂಚಿಕೊಂಡರು !

ಈ ವೇಳೆ ಅನಂತಪೂರ ದಂಪತಿಗಳಿಗೆ "ಜಮಖಂಡಿ ಪಟವರ್ಧನ ಮಹಾರಾಜರ ಅರಮನೆ" ಸುಂದರ ಮೂತಿ9ಯೊಂದನ್ನು ಗುರು ಕಾಣಿಕೆಯ ಗೌರವಾರ್ಥವಾಗಿ ಕೊಡುಗೆ ರೂಪದಲ್ಲಿ ಸಮಪಿ9ಸಿ ತನ್ಮಯದ ಸಂಪ್ರೇಮ ಶಿಷ್ಯರು ತೋರಿದ್ದಾರೆ. ಈ ಸುಘಳಿಗೆ ಶಿಕ್ಷಣ ಪ್ರಿಯರ ಹೃನ್ಮನ ತಣಿಸಿದೆ. ಗುರು-ಶಿಷ್ಯ ಪರಂಪರೆಯ ನೈತಿಕತೆಯಮೌಲ್ಯ ಹೆಚ್ಚಿಸಿದೆ. ಅನಂತಪೂರ ಗುರುಗಳಿಗೆ ವಿಶ್ರಾಂತ ಜೀವನ ಸುಖ,ನೆಮ್ಮದಿ, ಸಂತಸ, ಸಂತೃಪ್ತಿ, ಸಮೃದ್ಧಿ ನೀಡಲಿ. ತಮ್ಮ ಪ್ರೀತಿಯ ಗುರುಜಿಗಳ ಮನೋಭೀಷ್ಟಗಳು ನೆರವೇರಲಿ ಎಂದು ಶಿಷ್ಯರು ಶುಭ ಹಾರೈಸಿದರು.

ಈ ವೇಳೆ 2013-14 ನೇ ಸಾಲಿನ ಎಸ್ಸೆಸ್ಸೆಲ್ಸಿ ಬ್ಯಾಚಿನ್ ಪ್ರಮುಖ ಹಳೆ ವಿದ್ಯಾರ್ಥಿಗಳಾದ ಮಲ್ಲಿಕಾರ್ಜುನ ಮಠಪತಿ, ರವಿ ಧರಿಗೌಡ, ಮಲಿಕ್ ದಶ್ಯಾಳ, ರಾಜೇಶ ನ್ಯಾಮಗೌಡ, ಮುತ್ತು ಮೇತ್ರಿ, ಭರತೇಶ ಜಮಖಂಡಿ, ಶ್ರೀಧರ ನ್ಯಾಮಗೌಡ, ಶಶಿಧರ ಬಡಿಗೇರ, ರಮೇಶ ಅಂಬಿ, ನಾಗೇಶ ದಾನಗೌಡ, ಚೇತನ ದಾನಗೌಡ, ರಮೇಶ ಹಳ್ಳಿ, ವಿದ್ಯಾರ್ಥಿನಿಯರಾದ ಚಂದನಾ ಸವದಿ, ಅಮೃತಾ ಗುರವ ಹಾಗೂ ಅನಂತಪೂರ ಅವರ ಮಡದಿ ಶ್ರೀಮತಿ ಲಕ್ಷ್ಮೀ ಅನಂತಪೂರ, ಸುಪುತ್ರಿ ಅಪೂವಾ9 ಅನಂತಪೂರ ಇತರರಿದ್ದರು.

### ಹಳೆ ವಿದ್ಯಾರ್ಥಿಗಳ ಉವಾಚ

ಅನಂತಪೂರ ಗುರುಗಳು ನಮ್ಮಲ್ಲಿ ಕೌಶಲ್ಯ, ಮನೋಬಲ, ಹಂಬಲ, ಸನ್ಮಾರ್ಗದಂತ ಸದ್ಗುಣಗಳನ್ನು ಧಾರೆಯರೆದಿದ್ದಾರೆ. ಅವರ ಅಂತಃಶಕ್ತಿ ಅಂತಃಕರಣ ಮಾನವೀಯ ಮೌಲ್ಯಗಳ ಶಕ್ತಿಯುತವಾಗಿದೆ.ಅನಂತಪೂರ ಅವರ ಸಿಸ್ಟಮ್ ಶಿಸ್ತಿನ ಸಂಗಮವಾಗಿದೆ. ನಿವೃತ್ತರಾದರೂ ಇನ್ನೂ ನಮ್ಮ ಗುರುಗಳ ಮೈಂಡ್ ಪವರ್ ಸ್ಟ್ರಾಂಗ್ ಸ್ಟ್ರೀಮ್ ಅಗಿದೆ. ಚೈತನ್ಯದ ಚಿಲುಮೆ ರಾರಾಜಿಸುತ್ತಿದೆ. ಇಂಥ ಗುರುಗಳ ಕೈಯಲ್ಲಿ ವಿದ್ಯಾಜ್ಞಾನ ಪಡೆದಿರುವುದು ನಮ್ಮ ಭಾಗ್ಯ.ಅವರನ್ನು ಗೌರವದಿಂದ, ಉಲ್ಲಾಸ,ಉತ್ಸಾಹದಿಂದ ಗುರುಭಕ್ತಿಯಿಂದ ,ಅಭಿಮಾನದಿಂದ ಸನ್ಮಾನಿಸಿದ್ದು ತಮಗೆಲ್ಲ ಖುಷಿ ತಂದಿದೆ ಎಂದು ಹಳೆ ವಿದ್ಯಾರ್ಥಿಗಳು ಹೇಳಿಕೊಂಡರು.

### 34 ಅಂಗನವಾಡಿಗಳನ್ನು ಆಕರ್ಷಕ ಅಂಗನವಾಡಿ ಕೇಂದ್ರಗಳಾಗಿ ಅಭಿವೃದ್ಧಿ। ಜಿಪಂ ಸಿಇಓ ರಿಷಿ ಆನಂದ ಸ್ಪಷ್ಟನೆ

# ಜಿಲ್ಲೆಯಲ್ಲಿ ಮಾದರಿ ಅಂಗನವಾಡಿಗಳ ಅಭಿವೃದ್ಧಿಗೆ ಕ್ರಮ

ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯಲ್ಲಿ ಮಾದರಿ ಅಂಗನವಾಡಿಗಳನ್ನು ಅಭಿವೃದ್ಧಿಗೊಳಿಸುವ ನಿಟ್ಟಿನಲ್ಲಿ ಕ್ರಮವಹಿಸಲಾಗುತ್ತಿದೆ ಎಂದು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾ-ರಿಗಳಾದ ರಿಷಿ ಆನಂದ ಅವರು ತಿಳಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಜಿಲ್ಲಾ ಪಂಚಾಯತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ 34 ಅಂಗನವಾಡಿಗಳನ್ನು ಮಾದರಿ ಹಾಗೂ ಆಕರ್ಷಕ ಅಂಗನವಾಡಿ ಕೇಂದ್ರಗಳನ್ನಾಗಿ ಅಭಿವೃದ್ಧಿಪಡಿಸಲಾಗುತ್ತಿದೆ. ಇದ-ರಿಂದ ಗ್ರಾಮೀಣ ಮಟ್ಟದ ಮಕ್ಕಳ ಶೈಕ್ಷಣಿಕ ಜೀವನದ ಅಡಿಪಾಯವು ಅತ್ಯಂತ ಸದೃಢವಾಗುವುದರ ಜೊತೆಗೆ ಮಕ್ಕಳ ಹಾಜರಾತಿಯ ನಿರಂತರತೆಯನ್ನು ಕಾಯ್ದುಕೊಂಡು ಮಕ್ಕಳ ಸ್ನೇಹಿ ಕೇಂದ್ರಗಳನ್ನಾಗಿಸುವುದಾಗಿದೆ. ಆಟೋಟಗಳಲ್ಲಿ ಪ್ರೋತ್ಸಾಹ ದೊರೆತು ದೈಹಿಕ ಹಾಗೂ ಮಾನಸಿಕ ಸದೃಢತೆ ಬೆಳೆಸುವುದಾಗಿದೆ. ಈಗಾಗಲೇ ದುರಸ್ತಿ ಕಾರ್ಯ ಪೂರ್ಣಗೊಂಡಿದ್ದು, ಎಲ್ಲಾ 34 ಅಂಗನವಾಡಿ ಕೇಂದ್ರಗಳಿಗೆ ಕಡ್ಡಾಯವಾಗಿ ಬಾಲ ಸ್ನೇಹಿ ಪೇಂಟಿಂಗ್, ಬಯೋಫೆನ್ಸಿಂಗ್, ಪೌಷ್ಟಿಕ ಕೈತೋಟ ಹಾಗೂ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ಸಂಬಂಧಿಸಿದ ಅಧಿಕಾ-ರಿಗಳಿಗೆ ಸೂಚಿಸಲಾಗಿದೆ.

ವಿಜಯಪುರ ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ 2,755 ಅಂಗನವಾಡಿ ಕೇಂದ್ರಗಳಿದ್ದು, ಅದರಲ್ಲಿ 1,425 ಸ್ವಂತ ಕಟ್ಟಡಗಳಲ್ಲಿ ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ. 2022-23ನೇ ಸಾಲಿನಲ್ಲಿ ಒಟ್ಟು 100 ಅಂಗನವಾಡಿ ಕೇಂದ್ರಗಳ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಅದರಲ್ಲಿ 66 ಅಂಗನವಾಡಿ ಕೇಂದ್ರಗಳು ಈಗಾಗಲೇ ಪೂರ್ಣಗೊಂಡಿದ್ದು, ಎಲ್ಲಾ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. ಮಕ್ಕಳಿಗೆ ಶಾಲಾಪೂರ್ವ ಶಿಕ್ಷಣಕ್ಕಾಗಿ ಬಾಲಸ್ನೇಹಿ ಪೇಂಟಿಂಗ್‌ನಿಂದ ಕೂಡಿರುವ ಸುಂದರವಾದ ಕೊಠಡಿ, ಪ್ರತ್ಯೇಕವಾದ ಮತ್ತು ವ್ಯವಸ್ಥಿತವಾದ ಅಡುಗೆ ಕೊಠಡಿ ನಿರ್ಮಾಣ, ದಾಸ್ತಾನು ಕೊಠಡಿ ಹಾಗೂ ಶೌಚಾಲಯ, ಮಕ್ಕಳಿಗೆ ಪ್ರತ್ಯೇಕ ಕೈತೊಳೆಯುವ ಸ್ಥಳ, ಕೇಂದ್ರದ ಒಳ-ಹೊರಗೂ ಅತ್ಯಾಕರ್ಷಕ ಬಾಲಸ್ನೇಹಿ ಪೇಂಟಿಂಗ್, ಅಂಗನವಾಡಿ ಕೇಂದ್ರಗಳಿಗೆ ಅವಶ್ಯಕವಾದ ನೀರಿನ ಸೌಕರ್ಯ, ವಿದ್ಯುತ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಕೇಂದ್ರದ ಆವರಣದಲ್ಲಿ ಕಿಚನ್ ಗಾರ್ಡನ್ ಹಾಗೂ ಜೈವಿಕ ಬೇಲಿ ನಿರ್ಮಾಣ ಮಾಡಲಾಗಿದೆ. ಹೆಚ್ಚಿನ ಸ್ಥಳಾವಕಾಶ ಇರುವ ಅಂಗನವಾಡಿ ಕೇಂದ್ರಗಳಿಗೆ ಕಂಪೌಂಡ ನಿರ್ಮಾಣವೂ ಮಾಡಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೀವಂತ ಪ್ರಮಾಣ ಪತ್ರ ಸಲ್ಲಿಸಲು ಸೂಚನೆ

ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮಾಶಾಸನ ಪಡೆಯುತ್ತಿರುವವರು ನವೆಂಬರ್ ತಿಂಗಳಿನಲ್ಲಿ ಜೀವಂತ ಪ್ರಮಾಣ ಪತ್ರ ಸಲ್ಲಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಕೋರಿದ್ದಾರೆ. ಇಲಾಖೆಯಿಂದ ಈಗಾಗಲೇ ಮಾಶಾಸನ ಪಡೆಯುತ್ತಿರುವ, ಕಷ್ಟ ಪರಿಸ್ಥಿತಿಯಲ್ಲಿರುವ ಸಾಹಿತಿ-ಕಲಾವಿದರಿಗೆ ಹಾಗೂ ಮೃತಪಟ್ಟ ಕಲಾವಿದರ ಪತ್ನಿಗೆ ಮಾಶಾಸನ ನೀಡಲಾಗುತ್ತಿದ್ದು, ಆಧಾರ ಪ್ರತಿ, ಪಿಂಚಣಿ ಪುಸ್ತಕ ಪ್ರತಿ, ಬ್ಯಾಂಕ್ ಪಾಸ್‌ಬುಕ್ ಪ್ರತಿ, ಐಡೆಂಟಿಟಿ ಅಳತೆ ಭಾವಚಿತ್ರದೊಂದಿಗೆ ಜೀವಂತ ಪ್ರಮಾಣ ಪತ್ರವನ್ನು ನಗರದ ಸ್ಟೇಶನ್ ರಸ್ತೆಯ ಕಂದಗಲ್ ಶ್ರೀ ಹನುಮಂತರಾಯ ರಂಗ ಮಂದಿರದಲ್ಲಿರುವ ಸಹಾಯಕ ನಿರ್ದೇಶಕರ ಕಚೇರಿಗೆ ಖುದ್ದಾಗಿ ಸಲ್ಲಿಸುವಂತೆಯೂ,ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ದೂರವಾಣಿ 08352-251261 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಳಿಕೆ ಸೀಟುಗಳ ಭರ್ತಿಗೆ ನ.15 ವರೆಗೆ ಪ್ರವೇಶಾತಿಗೆ ಅವಕಾಶ

ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ರಾಜ್ಯ ಅಕ್ಕಮಹಾದೇವಿಮಹಿಳಾವಿಶ್ವವಿದ್ಯಾನಿಲಯದ ಪ್ರಸಕ್ತ ಸಾಲಿನ (2024-25) ಸ್ನಾತಕೋತ್ತರ ಮತ್ತು ವ್ಯಾಲ್ಯು ಆಡೆಡ್ ಡಿಪ್ಲೋಮಾ/ಅಡ್ವಾನ್ಸ್ ಡಿಪ್ಲೋಮಾ ಹಾಗೂ ಸರ್ಟಿಫಿಕೇಟ್ ಕೋರ್ಸ್‌ಗಳ ಖಾಲಿ ಉಳಿದ ಸೀಟುಗಳ ಭರ್ತಿಗಾಗಿ ನವೆಂಬರ್ 15ರ ವರೆಗೆ ಪ್ರವೇಶಾತಿ ಪಡೆಯಬಹುದು ಎಂದು ಕುಲಸಚಿವ ಶಂಕರಗೌಡ ಸೋಮನಾಳ ಅವರು ತಿಳಿಸಿದ್ದಾರೆ. ಕನ್ನಡ, ಇಂಗ್ಲಿಷ್, ಹಿಂದಿ, ಉರ್ದು, ಮಹಿಳಾ ಅಧ್ಯಯನ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ, ಅರ್ಥಶಾಸ್ತ್ರ, ಸಮಾಜಶಾಸ್ತ್ರ, ಸಮಾಜ ಕಾರ್ಯ, ಎಂ.ಎಸ್‌ಸಿ ಇನ್ ಬಯೋಇನ್ಫರ್ಮೆಟಿ-ಕ್ಸ್, ಬಯೋಟೆಕ್ನಾಲಜಿ, ಭೌತಶಾಸ್ತ್ರ, ಕಂಪ್ಯೂಟ-ರ್ ಸೈನ್ಸ್, ಸಂಖ್ಯಾಶಾಸ್ತ್ರ, ಆಹಾರ ಸಂಸ್ಕರಣೆ ಮತ್ತು ಪೋಷಣೆ, ಔಷಧೀಯ ರಸಾಯನಶಾಸ್ತ್ರ, ಮತ್ತು ಎಂ-ಎಡ್, ಎಂಪಿಎಡ್, ಬಿಪಿಎಡ್, ಸಂಗೀತ ವಿಷಯಗಳ ಸ್ನಾತಕೋತ್ತರ ಕೋರ್ಸ್‌ಗಳಿಗೆ ಮತ್ತು ಪಿಜಿಡಿಸಿಯಲ್ಲಿ ಸೀಟುಗಳು ಲಭ್ಯವಿವೆ. ನವೆಂಬರ್ 15ರ ವರೆಗೆ ಈ ಕೋರ್ಸ್‌ಗಳಿಗೆ ಮಾತ್ರ ಪ್ರವೇಶ ನೀಡಲಾಗುವುದು.ಈ ಮೇಲೆ ಹೇಳಿರುವ ಮಹಿಳಾ ವಿಶ್ವವಿದ್ಯಾನಿಲಯದ ಯಾವುದೇ ವಿಭಾಗಗಳಲ್ಲಿ ಪ್ರವೇಶ ಪಡೆಯಲು ಈಗಾಗಲೇ ಯುಯುಸಿಎಂಎಸ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಇಲ್ಲಿಯ ವರೆಗೆ ಪ್ರವೇಶ ಪಡೆಯದೇ ಇರುವವರು ಮತ್ತು ಈಗಾಗಲೇ ಅರ್ಜಿ ಸಲ್ಲಿಸದೇ ಇರುವವರು ಸಹ ಅರ್ಜಿ ಸಲ್ಲಿಸಲು ನವೆಂಬರ್ 15 ಕೊನೆಯ ದಿನವಾಗಿದ್ದು ಯುಯುಸಿಎಂಎಸ್ https://uucms.karnataka.gov.in/Login/Index ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಸಲ್ಲಿಸಿದ ನಂತರ ನೇರವಾಗಿ ಖಾಲಿ ಸೀಟುಗಳು ಲಭ್ಯವಿರುವ ಯಾವುದೇ ವಿಭಾಗ, ಸ್ನಾತಕೋತ್ತರ ಕೇಂದ್ರಗಳಿಗೆ ಭೇಟಿ ನೀಡಿ ಪ್ರವೇಶ ಪಡೆಯಬಹುದಾಗಿದೆ ಎಂದು ವಿವಿ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ವಿವಿಯ website: www.kswu.ac.in ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ನ.8ಕ್ಕೆ ಹೋಬಳಿ ಮಟ್ಟದ 13 ಗ್ರಾಮಗಳಲ್ಲಿ ಪಿಂಚಣಿ ಅದಾಲತ್

ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಪಿಂಚಣಿದಾರರ ಅಹವಾಲು ಆಲಿಸಲು ಹಾಗೂ ಅರ್ಹ-ರಿಗೆ ಪಿಂಚಣಿ ಮಂಜೂರು ಮಾಡುವ ಕು-ರಿತ ಸಾಮಾಜಿಕ ಭದ್ರತಾ ಯೋಜನೆಯಡಿಯ ಜಿಲ್ಲೆಯ 13 ಗ್ರಾಮಗಳಲ್ಲಿ ನವೆಂಬರ್ 8 ರಂದು ಬೆಳಿಗ್ಗೆ 11 ಗಂಟೆಗೆ ಹೋಬಳಿ ಮಟ್ಟದ ಪಿಂಚಣಿ ಅದಾಲತ್ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ತಿಳಿಸಿದ್ದಾರೆ. ನವೆಂಬರ 8ರ ಬೆಳಿಗ್ಗೆ 11 ಗಂಟೆಗೆ ವಿಜಯಪುರ ಉಪ ವಿಭಾಗಾಧಿಕಾರಿ ನಿಡಗುಂದಿ ತಾಲೂಕಿನ ಯಲಗೂರ ಗ್ರಾಮ ಪಂಚಾಯತ್ ಕಾರ್ಯಾಲಯದಲ್ಲಿ, ಇಂಡಿ ಉಪ ವಿಭಾಗಾಧಿಕಾರಿ ಇಂಡಿ ತಾಲೂಕಿನ ಬೂದಿಹಾಳ ಗ್ರಾಮದ ಶ್ರೀ ಹನುಮಾನ್ ದೇವಸ್ಥಾನದ ಆವರಣದಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ವಿಜಯಪುರ ಗ್ರೇಡ್ 2 ತಹಶೀಲ್ದಾರ ಅವರು ವಿಜಯಪುರದ ವಾರ್ಡ್ ನಂಬರ್ 3ರ ಓಂ ಗಣಪತಿ ದೇವಸ್ಥಾನ, ಸಿಂಧೆ ಕಾಲೋನಿ ಭಾವಸಾರ ನಗರದಲ್ಲಿ, ತಿಕೋಟಾ ಗ್ರೇಡ್ 2 ತಹಶೀಲ್ದಾರ ಅವರು ಹರನಾಳದ ಶ್ರೀ ವಿಠ್ಠಲ ಮಂದಿರದಲ್ಲಿ, ಬಬಲೇಶ್ವರ ಗ್ರೇಡ್ 2 ತಹಶೀಲ್ದಾರ ಅವರು ಧನ್ಯಾಳದ ಮಳೇಸ್ವಾಮಿ ದೇವಸ್ಥಾನದಲ್ಲಿ, ಬಸವನ ಬಾಗೇವಾಡಿ ಗ್ರೇಡ್ 2 ತಹಶೀಲ್ದಾರ ಅವರು ನರಸಲಗಿಯ ಶ್ರೀ ಹನುಮಾನ್ ದೇವಸ್ಥಾನದಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.ಕೋಲಾರ ತಹಶೀಲ್ದಾರ ಅವರು ಚಿಕ್ಕ ಗರಸಂಗಿಯ ಶ್ರೀ ಹನುಮಾನ ದೇವಸ್ಥಾನದಲ್ಲಿ, ಮುದ್ದೇಬಿಹಾಳ ಗ್ರೇಡ್ 2 ತಹಶೀಲ್ದಾರ ಅವರು ನಾಗರಾಳದ ಶ್ರೀ ಮಾರುತೇಶ್ವರ ದೇವಸ್ಥಾನದಲ್ಲಿ, ತಾಳಿಕೋಟೆಯ ತಹಶೀಲ್ದಾರ ಅವರು ತಾಳಿಕೋಟಿ ಪಟ್ಟಣದ ವಾರ್ಡ್ ನಂಬರ್ 23ರ ಸಮುದಾಯ ಭವನ ವಡ್ಡರ ಓಣಿಯಲ್ಲಿ, ಚಡಚಣದ ಗ್ರೇಡ್ 2 ತಹಶೀಲ್ದಾರ ಅವರು ಮರಗೂರನ ಶ್ರೀ ಹನುಮಾನ್ ದೇವಸ್ಥಾನದಲ್ಲಿ, ಸಿಂದಗಿ ಗ್ರೇಡ್ 2 ತಹಶೀಲ್ದಾರ ಅವರು ಚಿಕ್ಕ ಸಿಂದಗಿಯ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ದೇವರಹಿಪ್ಪರಗಿ ಗ್ರೇಡ್ 2 ತಹಶೀಲ್ದಾರ ಅವರು ನಿವಾಳಖೇಡದ ಶ್ರೀ ಬೀರಲಿಂಗೇಶ್ವರ ದೇವಸ್ಥಾನದಲ್ಲಿ, ಆಲಮೇಲ ತಹಶೀಲ್ದಾರ ಅವರು ತಾವರ ಖೇಡದ ಸರಕಾರಿ ಗಂಡು ಮಕ್ಕಳ ಶಾಲೆಯಲ್ಲಿ ಪಿಂಚಣಿ ಅದಾಲತ್ ನಡೆಸಲಿದ್ದಾರೆ. ಪಿಂಚಣಿ ಅದಾಲತ್ ನಡೆಯುವ ಗ್ರಾಮಗಳಲ್ಲಿ ಸಾಮಾಜಿಕ ಭದ್ರತೆ ಪಿಂಚಣಿ ಫಲಾನುಭವಿಗಳಿಗೆ ಎನ್.ಪಿ.ಸಿ.ಐ. ಮ್ಯಾಪಿಂಗ್ ಕಾರ್ಯವನ್ನು ಸಂಬಂಧಿಸಿದ ಬ್ಯಾಂಕ್, ಅಂಚೆ ಕಚೇರಿ ಅಧಿಕಾರಿಗಳ ಸಹಯೋಗದೊಂದಿಗೆ ತಪ್ಪದೇ ಮಾಡಿಸುವಂತೆಯೂ ಹಾಗೂ ಪಿಂಚಣಿ ಅದಾಲತ್‌ನಲ್ಲಿ ಪಿಂಚಣಿದಾರರ ಮಾಹಿತಿಯೊಂದಿಗೆ ಎಲ್ಲಾ ಗ್ರಾಮಗಳ ಗ್ರಾಮ ಲೆಕ್ಕಿಗರು, ಪಂಚಾಯತ್ ಕಾರ್ಯದರ್ಶಿಗಳು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಅಂಚೆ ಕಚೇರಿ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿರುವಂತೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ವಚನಗಳಲ್ಲಿ ಜೀವನ ಮೌಲ್ಯಗಳಿವೆ :ಹಿರೇಮಠ

ಉದಯರಶ್ಮಿ ದಿನಪತ್ರಿಕೆ




ಬಸವನಬಾಗೇವಾಡಿ: 12 ನೇ ಶತಮಾನದ ಬಸವಾದಿ ಶರಣ-ರ ಸಂದೇಶಗಳನ್ನು ನಾಡಿನಲ್ಲಿ ಶರಣ ಸಾಹಿತ್ಯ ಪರಿಷತ್ತು ದತ್ತಿ ಉಪನ್ಯಾಸ, ಸಮ್ಮೇಳನ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಪ್ರಸಾರ ಮಾಡುತ್ತಿರುವುದು ಶ್ಲಾಘನೀಯ ಎಂದು ನಿವೃತ್ತ ಪ್ರಾಧ್ಯಾಪಕ ಪಿ.ಎಲ್.ಹಿರೇಮಠ ಹೇಳಿದರು.

ಪಟ್ಟಣದ ಶಿವಾನಂದ ಪೂಜಾರಿ ಅವರ ನಿವಾಸದಲ್ಲಿ ತಾಲೂಕು ಶರಣ ಸಾಹಿತ್ಯ ಪರಿಷತ್ತು ಲಿಂ. ಮಹಾದೇವಪ್ಪ ಶಿವಪ್ಪ ಪೂಜಾರಿ ಸ್ಮರಣಾರ್ಥ ಸೋಮವಾರ ಸಂಜೆ ಹಮ್ಮಿಕೊಂಡಿದ್ದ ದತ್ತಿ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಬಸವಾದಿ ಶರಣರು ರಚಿಸಿರುವ ವಚನಗಳಲ್ಲಿ ಮಾನವೀಯ ಮೌಲ್ಯಗಳಿವೆ. ವಚನಗಳಲ್ಲಿರುವ ಜೀವನ ಮೌಲ್ಯಗಳನ್ನು ಅರಿತು ನಡೆದರೆ ಸಮಾಜದಲ್ಲಿ ಸನ್ಮಾರ್ಗದಲ್ಲಿ ನಡೆಯಲು ಪೂರಕವಾಗಿದೆ. ಇಂತಹ ವಚನ ಸಂದೇಶವನ್ನು ಶರಣ ಸಾಹಿತ್ಯ ಪರಿಷತ್ತು ಶಾಲೆಗಳಲ್ಲಿ, ಗ್ರಾಮಾಂತರ ಪ್ರದೇಶಗಳಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಜನಮಾಸನಕ್ಕೆ ಮುಟ್ಟಿಸುವ ಕಾರ್ಯದಲ್ಲಿ ತೊಡಗಿಕೊಂಡಿದೆ ಎಂದರು. ನಿವೃತ್ತ ಬ್ಯಾಂಕ್ ವ್ಯವಸ್ಥಾಪಕ ವಿರೇಶ ಕುಂಟೋಜಿ ಮಾತನಾಡಿ, ವಿಶ್ವಗುರು ಬಸವೇಶ್ವರರು ಬಯಸಿದ ಉದಾತ್ತ ಸಮಾಜ ಕಟ್ಟುವ ಕಾರ್ಯವನ್ನು ಮತ್ತು ಧಾರ್ಮಿಕ ಪ್ರಪಂಚದಲ್ಲಿ ಉಂಟು ಮಾಡಿದ ಕ್ರಾಂತಿಯನ್ನು ಪುಷ್ಠಿಕರಿಸಲು ಅವರ ಸಮಕಾಲೀನ ಅನೇಕ ಶರಣರು ಅವರೊಂದಿಗೆ ಇದ್ದರು ಎಂಬುವದನ್ನು ನಾವು ನೋಡುತ್ತೇವೆ. ಶರಣರು ಆಚ-ರವೇ ಸ್ವರ್ಗ, ಅನಾಚಾರವೇ ನರಕ ಎಂದು ಹೇಳುವ ಮೂಲಕ ಸ್ವರ್ಗ-ನರಕಗಳ ಕಲ್ಪನೆಯ ಬಗ್ಗೆ ನಾವು ಮಾಡುವ ಕಾಯಕಗಳ ಮೂಲಕ ಸ್ವರ್ಗ-ನರಕ ಇರುವಾಗಲೇ ಪಡೆಯಬಹುದು ಎಂದು ಹೇಳಿದರು. ಬದುಕಿನ ಕಲೆಯನ್ನು ಬಸವಾದಿ ಶರಣ-ರು ನುಡಿದಂತೆ ನಡೆಯುವ ಮೂಲಕ ನಮಗೆ ತೋ-ರಿಸಿಕೊಟ್ಟಿದ್ದಾರೆ. ಬಸವಾದಿ ಶರಣ-ರ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವೀರಣ್ಣ ಮರ್ತುರ, ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಎಸ್.ಕೆ.ಸೋಮನಕಟ್ಟಿ, ಶಿವಾನಂದ ಪೂಜಾರಿ ಇತರರು ಇದ್ದರು. ಸಾವಿತ್ರಿ ಕಲ್ಯಾಣಶೆಟ್ಟಿ ಪ್ರಾರ್ಥಿಸಿದರು. ಆರ್.ಜಿ.ಅಳ್ಳಗಿ ಸ್ವಾಗತಿಸಿ, ನಿರೂಪಿಸಿ, ವಂದಿಸಿದರು. ಇದೇ ಸಂದರ್ಭದಲ್ಲಿ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ಜನಪದ ಗಾಯಕ ಬಸವರಾಜ ಹಾ-ರಿವಾಳ, ಪಿಎಚ್ಡಿ ಪದವಿ ಪಡೆದ ಕಿರಣ ನಡಕಟ್ಟಿ ಅವರನ್ನು ಸನ್ಮಾನಿಸಲಾಯಿತು.

### ಜಿಲ್ಲಾ ವಿಪತ್ತು ನಿರ್ವಹಣೆ ಯೋಜನೆಯ ಸುಧಾರಣಾ ವಿಷಯಾಧಾರಿತ ಕಾರ್ಯಾಗಾರ

# ವಿಕೋಪ ಪರಿಸ್ಥಿತಿ ನಿರ್ವಹಣೆಗೆ ಮುಂಜಾಗ್ರತಾ ತರಬೇತಿ ಅಗತ್ಯ

ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಅತಿವೃಷ್ಟಿ-ಅನಾವೃಷ್ಟಿ, ಬೆಂಕಿ ಅವಘಡಗಳಂತಹ ಪ್ರಾಕೃತಿಕ ವಿಕೋಪ ಸಂಭವಿಸುವ ಪರಿಸ್ಥಿತಿಯಲ್ಲಿ ಜನ ಜಾನುವಾರುಗಳ ರಕ್ಷಣೆಗೆ ಅಗತ್ಯ ಮುಂಜಾಗ್ರತಾ ತರಬೇತಿ ಹೊಂದುವುದು ಅಗತ್ಯವಾಗಿರುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರು ಹೇಳಿದರು.

ಅವರು ನಗರದ ಟಕ್ಕೆ ರಸ್ತೆಯಲ್ಲಿರುವ ಜಿಲ್ಲಾ ತರಬೇತಿ ಸಂಸ್ಥೆಯ ಸಭಾ ಭವನದಲ್ಲಿ ಆಡಳಿತ ತರಬೇತಿ ಸಂಸ್ಥೆ ಮೈಸೂರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಹಾಗೂ ಜಿಲ್ಲಾಡಳಿತದ ಸಹಯೋಗದಲ್ಲಿ ಮಂಗಳವಾರ ನಡೆದ ಜಿಲ್ಲಾ ವಿಪತ್ತು ನಿರ್ವಹಣೆ ಯೋಜನೆಯ ಸುಧಾರಣಾ ವಿಷಯಾಧಾರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಅನಿರೀಕ್ಷಿತವಾಗಿ ಸಂಭವಿಸಬಹುದಾದ ಪ್ರಾಕೃತಿ-ಕ ವಿಕೋಪಗಳನ್ನು ನಿರ್ವಹಿಸಲು, ತುರ್ತು ಪರಿಹಾರೋಪಾಯಗಳನ್ನು ಹೇಗೆ ಕಾರ್ಯರೂಪಕ್ಕೆ ತರಬಹುದು ಎಂಬುದರ ಬಗ್ಗೆ ಮುಂಚಿತವಾಗಿಯೇ ರೂಪುರೇಷೆ ಸಿದ್ಧಪಡಿಸಿಕೊಂಡಿರಬೇಕು. ವಿದ್ಯುತ್ ಅವಘಡ, ಪ್ರವಾಹದಂತಹ ಯಾವುದೇ ಪ್ರಾಕೃತಿ-ಕ ವಿಕೋಪಗಳನ್ನು ಎದುರಿಸಲು ರಕ್ಷಣಾ ಕಾರ್ಯಾಚರಣೆಯಲ್ಲಿ ರಕ್ಷಣಾ ಸಿಬ್ಬಂದಿ ತಮ್ಮ ಪ್ರಾಣ ಪಣಕ್ಕಿಟ್ಟು ರಕ್ಷಣೆಗೆ ಮುಂದಾಗುತ್ತಾರೆ. ಈ ಸಂದರ್ಭದಲ್ಲಿ ಹಲವು ಇಲಾಖೆಗಳು ಸಮನ್ವಯ ಸಾಧಿಸಿ ಅಗತ್ಯ ಸಿದ್ಧತೆಗಳನ್ನು ಕೈಗೊಂಡು ಪರಿಹಾರಾತ್ಮಕ ಕಾರ್ಯಾಚರಣೆಗೆ ಆದ್ಯತೆ ನೀಡಬೇಕು ಎಂದರು.

ಆಡಳಿತ ತರಬೇತಿ ಸಂಸ್ಥೆ ಮೈಸೂರಿನ ಅಧಿಕಾ-ರಿಗ ಡಾ. ಚಂದ್ರನಾಯಕ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ವಿಕೋಪಗಳನ್ನು ತಡೆಗಟ್ಟಲಿರುವ ಯೋಜನೆಗಳನ್ನು ಅನುಷ್ಠಾನಗೊಳಿಸುವುದರ ಕುರಿತ ತರಬೇತಿ ನೀಡಲಾಗುತ್ತದೆ. ಒಟ್ಟು ಮೂರು ಹಂತದಲ್ಲಿ ತರಬೇತಿ ನೀಡಲಾಗುತ್ತಿದೆ. ಪ್ರಥಮ ಹಂತದಲ್ಲಿ ಜಿಲ್ಲಾ ಕೇಂದ್ರದಲ್ಲಿ ನಂತರ ಮೈಸೂರಿನಲ್ಲಿ ಎರಡನೇ ಹಂತದ ತರಬೇತಿಯನ್ನು ನೀಡಲಾಗುತ್ತದೆ. ಮೂರನೇಯ ಹಂತದಲ್ಲಿ ಆಯ್ದ ಅಧಿಕಾರಿಗಳ ತಂಡವನ್ನು ಬೇರೆ ರಾಜ್ಯಗಳಿಗೆ ಅಧ್ಯಯನ ಪ್ರವಾಸಕ್ಕೆ ಕರೆದೊಯ್ದು ಪ್ರಾಕೃತಿ-ಕ ವಿಕೋಪ ನಿರ್ವಹಣೆಗೆ ಇನ್ನಷ್ಟು ಹೆಚ್ಚಿನ ತರಬೇತಿ ನೀಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಂಶುಪಾಲರಾದ ಜಿ.ಎಸ್. ಹಿರೇಮಠ, ಜಿಲ್ಲಾ ಅಗ್ನಿಶಾಮಕಾಧಿಕಾರಿ ರಂಗನಾಥ, ಜಿಲ್ಲಾ ವಿಕೋಪ ನಿರ್ವಹಣಾ ಕೋಶದ ರಾಕೇಶ ಜೈನಾಪೂರ, ಕಂದಾಯ ಇಲಾಖೆ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಸಮಾಜಕಲ್ಯಾಣ ಇಲಾಖೆ, ನಾಗರಿಕ ರಕ್ಷಣಾ ಮತ್ತು ಗೃಹ ರಕ್ಷಕದಳ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಅರಣ್ಯ ಮತ್ತು ಪರಿಸರ ಇಲಾಖೆ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆಹಾರ ಮತ್ತು ನಾಗ-ರೀಕ ಸರಬರಾಜು ಇಲಾಖೆಯ ಅಧಿಕಾರಿಗಳು ತರಬೇತಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR